ಸಂಪುಟ : 8 ಸಂಚಿಕೆ :294 ಪುಟ : 4 ಬೆಲೆ : 3.00 ಬುಧವಾರ ಜನವರಿ 3, 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ


ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 8 Issue : 294 Pages : 4 Price : 3.00 Wednesday JANUARY 3, 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಇಂದು ಗದಗ ನಗರಕ್ಕೆ ಉಸ್ತುವಾರಿ ಸಚಿವ ಪಾಟೀಲ

■ ವಿಜಯಸಾಕ್ಷಿ ಸುದ್ದಿ, ಗದಗ



ರಾಜ್ಯ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಇಲಾಖೆ ಸಚಿವರಾದ ಡಾ.ಎಚ್.ಕೆ.ಪಾಟೀಲ ಅವರು ಜನವರಿ 3 ರಂದು ಮಧ್ಯಾಹ್ನ 12 ಗಂಟೆಗೆ ಗದಗ ನಗರದ ಟಾಂಗಾ ಕೂಟದಲ್ಲಿ ಸಾವಿತ್ರಿಬಾಯಿ ಪುಲೆ ಅವರ ಜಯಂತಿ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು.

ನಂತರ ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿ ಮಧ್ಯಾಹ್ನ 12.45 ಗಂಟೆಗೆ ಕಬೀರ್ ಮೊಬೈಲ್ ಕ್ಲಿನಿಕ್ ಲೋಕಾರ್ಪಣೆ ಮಾಡುವರು. ತದನಂತರ ಮಧ್ಯಾಹ್ನ 1 ಗಂಟೆಗೆ ರಸ್ತೆಯ ಮೂಲಕ ಗದಗನಿಂದ ಬೆಂಗಳೂರಿಗೆ ತೆರಳುವರು ಎಂದು ಸಚಿವರ ಕಾರ್ಯಾಲಯದ ಮೂಲಗಳು ತಿಳಿಸಿವೆ.

## ಸಾರ್ವಜನಿಕರ ಗಮನಕ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

2023–24ನೇ ಸಾಲಿಗೆ ಇಲಾಖೆಯಿಂದ ಯಶಸ್ವಿನಿ ಆರೋಗ್ಯ ರಕ್ಷಣಾ ಯೋಜನೆಯನ್ನು ಜಾರಿಗೊಳಿಸಲಾಗಿದೆ. ಸದರಿ ಯೋಜನೆಯಲ್ಲಿ ಸದಸ್ಯರಾಗಿ ನೋಂದಾಯಿಸಬಹುದಾಗಿದೆ. ಸಹಕಾರ ಸಂಘ/ ಸೌಹಾರ್ದ ಸಹಕಾರಿಗಳು/ ಬ್ಯಾಂಕುಗಳು ಮತ್ತು ಗ್ರಾಮೀಣ ಸ್ವ ಸಹಾಯ ಗುಂಪುಗಳಲ್ಲಿರುವ ಸದಸ್ಯರು ಕನಿಷ್ಟ 3 ತಿಂಗಳು ಮುಂಚೆ ಸದಸ್ಯತ್ವವನ್ನು ಹೊಂದಿರಬೇಕು. ಅಂತಹ ಸದಸ್ಯರು ಯಶಸ್ವಿನಿ ಯೋಜನೆಯಡಿಯಲ್ಲಿ ಹೊಸದಾಗಿ ನೋಂದಾಯಿಸಿ ಸದರಿ ಯೋಜನೆಯ ಸೌಲಭ್ಯವನ್ನು ಪಡೆದುಕೊಳ್ಳುವುದು.

ಫಲಾನುಭವಿ ಕುಟುಂಬಕ್ಕೆ ವಾರ್ಷಿಕ ವೈದ್ಯಕೀಯ ಚಿಕಿತ್ಸಾ ವೆಚ್ಚದ ಗರಿಷ್ಠ ಮಿತಿ ರೂ.5.00 ಲಕ್ಷ ನಿಗದಿಪಡಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಸಹಕಾರ ಸಂಘಗಳ ಉಪನಿಬಂಧಕರ ಕಚೇರಿ, ಜಿಲ್ಲಾಡಳಿತ ಭವನ, ಕೊಠಡಿ ಸಂಖ್ಯೆ –125 ಹಾಗೂ ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಎ.ಪಿ.ಎಂ.ಸಿ. ಯಾರ್ಡ್, ಎಸ್.ಬಿ.ಐ ಮುಖ್ಯ ಶಾಖೆ ಎದುರಿಗೆ , ಗದಗ ದೂರವಾಣಿ ಸಂಖ್ಯೆ 08372–238598 ಹಾಗೂ ತಾಲೂಖಾ ಸಹಕಾರ ಅಭಿವೃದ್ಧಿ ಅಧಿಕಾರಿ ನರಗುಂದ–8660099227, ಶಿರಹಟ್ಟಿ– 9739247088, ರೋಣ– 9538198110, ಮುಂಡರಗಿ 8088386791, ಗದಗ–9945187724 ಇವರನ್ನು ಸಂಪರ್ಕಿಸಬಹುದಾಗಿದೆ.

## ಜ. 5ರಂದು ಇ–ಶ್ರಮ ಯೋಜನೆಯಡಿ ಉಚಿತ ನೋಂದಣಿ ಅಭಿಯಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಜನವರಿ 5ರಂದು ಶಿಗ್ಲಿ ಮತ್ತು ಲಕ್ಷ್ಮೇಶ್ವರದಲ್ಲಿ ಇ–ಶ್ರಮ್ ಯೋಜನೆಯಡಿ ನೇಕಾರರನ್ನು (ಕೈಮಗ್ಗ ಮತ್ತು ವಿದ್ಯುತ್ ಮಗ್ಗ ಕಾರ್ಮಿಕರನ್ನು) ನೋಂದಾಯಿಸಲು ಕಾರ್ಮಿಕ ಇಲಾಖೆ ಮತ್ತು ಜವಳಿ ಇಲಾಖೆ ಸಹಯೋಗದೊಂದಿಗೆ ಉಚಿತ ನೋಂದಣಿ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ.

ಈ ಯೋಜನೆಯ ಸದುಪಯೋಗ ಪಡೆದುಕೊಳ್ಳಬೇಕೆಂದು ಜಿಲ್ಲಾ ಕಾರ್ಮಿಕ ಅಧಿಕಾರಿ ಬಿ.ಆರ್.ಜಾಧವ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಕಾರ್ಮಿಕ ಅಧಿಕಾರಿಯವರ ಕಚೇರಿ, ಜಿಲ್ಲಾ ಆಡಳಿತ ಭವನ, ಕೊಠಡಿ ಸಂಖ್ಯೆ 124, 1ನೇ ಮಹಡಿ, ಹುಬ್ಬಳ್ಳಿ ರಸ್ತೆ, ಗದಗ ಇವರನ್ನು ಸಂಪರ್ಕಿಸಬಹುದಾಗಿದೆ.

### ವಿಜಯಪುರದ ಜ್ಞಾನಯೋಗಾಶ್ರಮದಲ್ಲಿ ನಡೆದ ಸಿದ್ದೇಶ್ವರ ಮಹಾಸ್ವಾಮೀಜಿಗಳ ಗುರುನಮನ ಕಾರ್ಯಕ್ರಮದಲ್ಲಿ ಸಿ.ಎಂ ಸಿದ್ದರಾಮಯ್ಯ

# ಸಿದ್ದೇಶ್ವರ ಶ್ರೀಗಳ ಆಶಯದಂತೆ ಬದುಕುವುದೇ ಅವರಿಗೆ ಸಲ್ಲಿಸುವ ದೊಡ್ಡ ನಮನ

■ ವಿಜಯಸಾಕ್ಷಿ ಸುದ್ದಿ, ವಿಜಯಪುರ

ಸಿದ್ದೇಶ್ವರ ಸ್ವಾಮೀಜಿಗಳ ಬದುಕೇ ನಮಗೆ ಆದರ್ಶ. ಅವರ ಜೀವನದ ಆಶಯದಂತೆ ಬದುಕುವುದೇ ಅವರಿಗೆ ಸಲ್ಲಿಸುವ ದೊಡ್ಡ ಗೌರವ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಿದ್ದೇಶ್ವರ ಸ್ವಾಮೀಜಿಗಳಿಗೆ ಗುರುನಮನ ಸಲ್ಲಿಸಿದರು.

ಮಂಗಳವಾರ ವಿಜಯಪುರದ ಜ್ಞಾನಯೋಗಾಶ್ರಮದಲ್ಲಿ ಸಿದ್ದೇಶ್ವರ ಮಹಾಸ್ವಾಮೀಜಿಗಳ ಗುರುನಮನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ನಾನು ಇವತ್ತಿಗೂ–ಯಾವತ್ತಿಗೂ ಬಸವಾದಿ ಶರಣರ ಅನುಯಾಯಿ. ಸಿದ್ದೇಶ್ವರ ಸ್ವಾಮೀಜಿ ಬಸವಣ್ಣನವರ ರೀತಿಯಲ್ಲೇ ಜಾತಿ ಮತ್ತು ವರ್ಗ ರಹಿತ ಸಮ ಸಮಾಜಕ್ಕಾಗಿ ಶ್ರಮಿಸಿದವರು. ಸಿದ್ದೇಶ್ವರ ಸ್ವಾಮಿಗಳು ಜ್ಞಾನ ಸಂಪಾದಿಸಿದರು. ಆ ಜ್ಞಾನವನ್ನು ಜನಮಾನಸಕ್ಕೆ ಹಂಚಿದರು. ದ್ವೇಷ, ಅಹಂಕಾರದಿಂದ ಬಿಡುಗಡೆ ಹೊಂದಿದ ಅತ್ಯುನ್ನತ ಮನುಷ್ಯತ್ವದ ಸೃಷ್ಟಿಗೆ ಶ್ರಮಿಸಿದವರು. ಇವರ ಬದುಕು ಮತ್ತು ಸಾಧನೆಯನ್ನು ವರ್ಣಿಸಲು ಪದಗಳೇ ಇಲ್ಲ. ಅಷ್ಟು ಸರಳತೆ ಅವರ ಬದುಕು ಮತ್ತು ವ್ಯಕ್ತಿತ್ವದಲ್ಲಿ ಬೆರೆತಿತ್ತು ಎಂದು ವಿವರಿಸಿದರು.



ಧರ್ಮಾತೀತವಾಗಿ ಪ್ರತಿಯೊಬ್ಬರೂ ಬಾಳಬೇಕು ಎನ್ನುವುದು ಸಿದ್ದೇಶ್ವರ ಸ್ವಾಮಿಗಳ ಆಶಯವಾಗಿತ್ತು. ಸಮಾಜದ ಜಾತಿ ಮೈಲಿಗೆಯನ್ನು ಸೋಕಿಸಿಕೊಳ್ಳದೆ ದೂರ ಉಳಿದಿದ್ದ ದಾರ್ಶನಿಕರು ಅವರು. ಸಮಾಜದಲ್ಲಿ ದೂರದರ್ಶಿತ್ವ ಇಟ್ಟುಕೊಂಡು ಮನುಷ್ಯ ಸಮಾಜವನ್ನು ತಿದ್ದುವ ಗುರಿ ಹೊಂದಿದ್ದ ಕಾರಣಕ್ಕೇ ಇವರು ದಾರ್ಶನಿಕರಾಗಿದ್ದರು ಎಂದು ವಿವರಿಸಿದರು.

ಜಿಲ್ಲೆಯ ಸಚಿವರು ಮತ್ತು ಸಂತರು ಹೇಳಿದ ರೀತಿಯಲ್ಲಿ, ಸಿದ್ದೇಶ್ವರ ಶ್ರೀಗಳ ಬದುಕಿನ ಸಂದೇಶ ಮತ್ತು ಆದರ್ಶಗಳನ್ನು ಕಾಪಾಡುವ ಸ್ಮರಣಾರ್ಥ ಕಾರ್ಯ ಮಾಡಲು ಸರ್ಕಾರ ಸಿದ್ಧವಿದೆ ಎಂದು ಭರವಸೆ ನೀಡಿದರು.

ಸಿದ್ದೇಶ್ವರ ಸ್ವಾಮಿಗಳಿಗೆ ಗುರುನಮನ ಸಲ್ಲಿಸುವುದಕ್ಕಾಗಿಯೇ ನಾನು ಇಲ್ಲಿಗೆ ಬಂದಿದ್ದೇನೆ. ಸಿದ್ದೇಶ್ವರ ಸ್ವಾಮಿಗಳ ಬಗ್ಗೆ ನನಗೆ ವಿಶೇಷ ಗೌರವ ಮತ್ತು ಪ್ರೀತಿಯಿದೆ ಎಂದು ನುಡಿದರು.

ಜಿಲ್ಲಾ ಉಸ್ತುವಾರಿ ಸಚಿವರಾದ ಎಂ.ಬಿ. ಪಾಟೀಲ್, ಕಾನೂನು, ಪ್ರವಾಸೋದ್ಯಮ ಸಚಿವರಾದ ಎಚ್.ಕೆ. ಪಾಟೀಲ್, ಶಿವಾನಂದ ಪಾಟೀಲ್, ಮಾಜಿ ಸಚಿವ, ಶಾಸಕ ವಿನಯ್ ಕುಲಕರ್ಣಿ, ಶಾಸಕರಾದ ಸಿ.ಎಸ್. ನಾಡಗೌಡ, ಅಶೋಕ್ ಮನಗೋಳಿ ಸೇರಿ ಹಲವು ಪ್ರಮುಖರು ಗುರುನಮನಕ್ಕೆ ಸಾಕ್ಷಿಯಾದರು.

> ಸಿದ್ದಗಿರಿ ಕನ್ನೇರಿಮಠ ಕೊಲ್ಲಾಪುರದ ಅದೃಶ್ಯ ಕಾಡಸಿದ್ದೇಶ್ವರ ಮಹಾಸ್ವಾಮಿಗಳು, ಸಿರಿಗಿರೆಯ ಸುತ್ತೂರು ಮಠದ ಶಿವರಾತ್ರಿ ದೇಶೀಕೇಂದ್ರ ಮಹಾಸ್ವಾಮಿಗಳು, ಶಿವಮೂರ್ತಿ ಶಿವಾಚಾರ್ಯ ಮಹಾ ಶ್ರೀಗಳು, ಜ್ಞಾನಯೋಗಾಶ್ರಮದ ಬಸವಲಿಂಗ ಮಹಾಸ್ವಾಮೀಜಿಗಳು ಮತ್ತು ಹಲವು ಸಿದ್ದ ಸಂತರ ಸಾನ್ನಿಧ್ಯದಲ್ಲಿ ಲಕ್ಷಾಂತರ ಅನುಯಾಯಿಗಳ ಸಮ್ಮುಖದಲ್ಲಿ ಗುರುನಮನ ಕಾರ್ಯಕ್ರಮ ಉದ್ಘಾಟನೆಯಾಯಿತು.

### ಕಳಕೊಣ್ಣವರ ಕಾಲೇಜಿನಲ್ಲಿ ಸಾಂಘಿಕ ಚಟುವಟಿಕೆ ಉದ್ಘಾಟಿಸಿದ ಶಾಸಕ ಜಿ.ಎಸ್. ಪಾಟೀಲ


# ಪದವಿ ನಂತರವೂ ಉತ್ತಮ ಭವಿಷ್ಯವಿದೆ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಬರೀ ತಾಂತ್ರಿಕ ಶಿಕ್ಷಣ ಮಾತ್ರ ಶಿಕ್ಷಣ, ಪದವಿ ಶಿಕ್ಷಣ ಏನೂ ಅಲ್ಲ ಎಂದು ನೀವೆಂದಿಗೂ ಭಾವಿಸಬೇಡಿ. ಪದವಿ ನಂತರವೂ ನಿಮಗೆ ಉತ್ತಮ ಅವಕಾಶ ಮತ್ತು ಭವಿಷ್ಯವಿದೆ ಎಂದು ರೋಣ ಶಾಸಕ, ಕಾಲೇಜು ಅಭಿವೃದ್ಧಿ ಸಮಿತಿ ಅಧ್ಯಕ್ಷ ಜಿ.ಎಸ್. ಪಾಟೀಲ ಹೇಳಿದರು.

ಪಟ್ಟಣದ ಮರಿಯಪ್ಪ ಬಾಳಪ್ಪ ಕಳಕೊಣ್ಣವರ ಪ್ರಥಮದರ್ಜೆ ಕಾಲೇಜಿನಲ್ಲಿ ಮಂಗಳವಾರ ವಿವಿಧ ಸಾಂಘಿಕ ಚಟುವಟಿಕೆಗಳನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಬಿ.ಎ, ಬಿ.ಎಸ್‌ಸಿ, ಬಿ.ಕಾಮ್, ಬಿಬಿಎ, ಬಿಸಿಎ ಮುಂತಾದ ಪದವಿಗಳನ್ನು ಪಡೆದ ನಂತರ ನೀವು ಇಚ್ಛಿಸಿದರೆ ಐಎಎಸ್, ಐಪಿಎಸ್, ಅಧಿಕಾರಿಗಳಾಗುವ ಅವಕಾಶವೂ ಇದೆ. ಏನಾಗಬೇಕೆಂಬುದನ್ನು ಮೊದಲು ನಿರ್ಧರಿಸಿಕೊಂಡು ಉತ್ತಮ ವಿದ್ಯಾಭ್ಯಾಸ ಮಾಡಿ ನೀವು ಜೀವನದಲ್ಲಿ ಸಾಧನೆ ಮಾಡಬೇಕು. ಇಂದಿನ ಕಾರ್ಯಕ್ರಮವನ್ನು ಉದ್ಘಾಟಿಸುವಾಗ ನನಗೆ ನನ್ನ ಕಾಲೇಜಿನ ದಿನಗಳು ನೆನಪಾದವು. ಗ್ರಾಮೀಣ ಭಾಗದ ಈ ಸರಕಾರಿ ಕಾಲೇಜು ಉತ್ತಮ ಶಿಕ್ಷಣ ನೀಡುತ್ತಿದೆ. ಈ ಕಾಲೇಜಿನ ಕೀರ್ತಿ ಹೀಗೆಯೇ



ಮುಂದುವರೆಯಲಿ ಎಂದು ಶಾಸಕ ಪಾಟೀಲ ಹಾರೈಸಿದರು.

ಈ ಮಹಾವಿದ್ಯಾಲಯಕ್ಕೆ ಬರಲು ಸೂಕ್ತವಾದ ರಸ್ತೆಯಿಲ್ಲ. ಅದರ ಬಗ್ಗೆ ಪ್ರಾಚಾರ್ಯರು ಬೇಡಿಕೆಯನ್ನಿರಿಸಿದ್ದಾರೆ. ಹಾಗೆಯೇ ಇಲ್ಲೊಂದು ಪಿಯು ವಸತಿ ನಿಲಯದ ಬೇಡಿಕೆಯನ್ನೂ ಇರಿಸಿದ್ದಾರೆ. ಇವುಗಳನ್ನು ಆದ್ಯತೆಯ ಮೇರೆಗೆ ಬೇಗನೆ ಪೂರೈಸಿಕೊಡುವ ಭರವಸೆಯನ್ನು ಶಾಸಕರು ನೀಡಿದರು.

ಸಭೆಯನ್ನುದ್ದೇಶಿಸಿ ಗದಗ ಸ.ಪ್ರ.ದ ಕಾಲೇಜಿನ ಪ್ರಾಚಾರ್ಯ ಡಾ. ಎಸ್.ಎಫ್. ಸಿದ್ನೆಕೊಪ್ಪ ಮಾತನಾಡಿದರು. ವೇದಿಕೆಯ ಮೇಲೆ ಶಹರ ಘಟಕದ ಕಾಂಗ್ರೆಸ್ ಅಧ್ಯಕ್ಷ ಶಿವನಗೌಡ ಪಾಟೀಲ, ಪ.ಪಂ. ಸದಸ್ಯ ಮುತ್ತಪ್ಪ ನೂಲ್ಕಿ, ಮುಖಂಡರಾದ ಅಲ್ಲಾಭಕ್ಷಿ ನದಾಫ್, ಶೇಕಪ್ಪ ಜುಟ್ಲ, ಶೇಕಪ್ಪ ಕೆಂಗಾರ, ವಿದ್ಯಾರ್ಥಿ ಪ್ರತಿನಿಧಿ ಕೆ.ವೈ. ಹೊನ್ನವಾಡ, ವಿದ್ಯಾರ್ಥಿ ಪ್ರತಿನಿಧಿ ಅಕ್ಷತಾ ನರೇಗಲ್ಲ ಮುಂತಾದವರಿದ್ದರು.

ವಿದ್ಯಾರ್ಥಿ ಶರಣಪ್ಪ ಕಮಗೋಳಿ ಪ್ರಾರ್ಥಿಸಿದರು. ಉಪನ್ಯಾಸಕಿ ಜಯಶ್ರೀ ಮುತಗಾರ ಸ್ವಾಗತಿಸಿದರು. ಪ್ರಾಚಾರ್ಯ ಈ.ಆರ್. ಲಗಳೂರ ಅಧ್ಯಕ್ಷತೆ ವಹಿಸಿದ್ದರು. ಉಪನ್ಯಾಸಕ ಎಸ್.ಎಲ್. ಗುಳೇದಗುಡ್ಡ ಅತಿಥಿಗಳನ್ನು ಪರಿಚಯಿಸಿದರು. ಉಪನ್ಯಾಸಕಿ ಸಜೀಲ ನಿರೂಪಿಸಿದರೆ, ಉಪನ್ಯಾಸಕಿ ಸುನಂದಾ ಮುಂಜಿ ವಂದಿಸಿದರು.

> ಎಷ್ಟೋ ಜನ ಹೆಣ್ಣು ಮಕ್ಕಳು ಮನೆಯಲ್ಲಿನ ಆರ್ಥಿಕ ತೊಂದರೆಯಿಂದ ಶಿಕ್ಷಣವನ್ನು ಅರ್ಧಕ್ಕೆ ಮೊಟಕುಗೊಳಿಸುತ್ತಿದ್ದರು. ಅಂಥವರ ಅನಾನುಕೂಲವನ್ನು ಗಮನಿಸಿ ಪದವಿ ಶಿಕ್ಷಣದವರೆಗೆ ಯಾವುದೇ ಶುಲ್ಕವಿಲ್ಲದಂತೆ, ಕಾಲೇಜಿಗೆ ಬರಲು ಬಸ್‌ನ ಅನುಕೂಲವಾಗುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರಕಾರ ಎಲ್ಲವನ್ನೂ ಅನುಕೂಲ ಮಾಡಿಕೊಟ್ಟಿದೆ. ಇದರ ಪ್ರಯೋಜನವನ್ನು ನೀವು ಪಡೆದುಕೊಂಡು ಉತ್ತಮ ವಿದ್ಯಾಭ್ಯಾಸವನ್ನು ಪಡೆಯಬೇಕೆಂದು ಶಾಸಕ ಜಿ.ಎಸ್. ಪಾಟೀಲ ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

### ಸ್ವಾಮಿ ವಿವೇಕಾನಂದ ಜಯಂತಿ ಪೂರ್ವಭಾವಿ ಸಭೆಯಲ್ಲಿ ಅಪರ ಡಿಸಿ

# ಅರ್ಥಪೂರ್ಣ ಆಚರಣೆಗೆ ಸಿದ್ಧತೆ

■ ವಿಜಯಸಾಕ್ಷಿ ಸುದ್ದಿ, ಗದಗ

ಜನವರಿ 12ರಂದು ಸ್ವಾಮಿ ವಿವೇಕಾನಂದ ಜಯಂತಿ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಆಚರಿಸಲು ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳುವಂತೆ ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರದಂದು ಜರುಗಿದ ಸ್ವಾಮಿ ವಿವೇಕನಾಂದರ ಜಯಂತಿ ಕಾರ್ಯಕ್ರಮದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸ್ವಾಮಿ ವಿವೇಕಾನಂದರ ಜಯಂತಿ ಪ್ರಯುಕ್ತ ಜಿಲ್ಲಾ ಹಾಗೂ ತಾಲೂಕು ಮಟ್ಟದಲ್ಲಿ ಯುವ ಸಪ್ತಾಹ ಕಾರ್ಯಕ್ರಮ



ಆಯೋಜಿಸಲು ತಿಳಿಸಿದರು. ಅಲ್ಲದೇ ಪ್ರೌಢ ಹಾಗೂ ಪದವಿ ಕಾಲೇಜು ವಿದ್ಯಾರ್ಥಿಗಳಿಗೆ ರಾಷ್ಟ್ರ ನಿರ್ಮಾಣದಲ್ಲಿ ಯುವಕರ ಪಾತ್ರ ಕುರಿತು ಪ್ರಬಂಧ ಸ್ಪರ್ಧೆಗಳನ್ನು ಆಯೋಜಿಸಿ ವಿಜೇತ ವಿದ್ಯಾರ್ಥಿಗಳನ್ನು ಕಾರ್ಯಕ್ರಮದ ದಿನದಂದು ಆಹ್ವಾನಿಸುವಂತೆ ತಿಳಿಸಿದರು.

ಜನವರಿ 12ರಂದು ಜರುಗುವ ಕಾರ್ಯಕ್ರಮವನ್ನು ಜಿಲ್ಲಾಡಳಿತ ಭವನದ ಅಡಿಟೋರಿಯಂ ಸಭಾಂಗಣದಲ್ಲಿ ಆಯೋಜಿಸಲು ಸಭೆಯು ತೀರ್ಮಾನಿಸಿತು. ಕಾರ್ಯಕ್ರಮದ ದಿನದಂದು ಸ್ವಾಮಿ ವಿವೇಕಾನಂದರ ಕುರಿತು ಉಪನ್ಯಾಸ ನೀಡಲು ನುರಿತ ಉಪನ್ಯಾಸಕರನ್ನು ಕಾರ್ಯಕ್ರಮಕ್ಕೆ ಆಹ್ವಾನಿಸಬೇಕು.

ಕಾರ್ಯಕ್ರಮದ ಕುರಿತು ಆಮಂತ್ರಣ ಪತ್ರಿಕೆಗಳನ್ನು ಶಿಷ್ಟಾಚಾರದನ್ವಯ ಮುದ್ರಿಸಿ ಗಣ್ಯರಿಗೆ ಸಾಕಷ್ಟು ಮುಂಚಿತವಾಗಿ ತಲುಪಿಸುವಂತೆ ತಿಳಿಸಿದರು. ಕಾರ್ಯಕ್ರಮದಲ್ಲಿ ಶಿಷ್ಟಾಚಾರ ಉಲ್ಲಂಘನೆಯಾಗದಂತೆ ನಿಗಾ ವಹಿಸಬೇಕು. ಕಾರ್ಯಕ್ರಮ ದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಯುವಜನರು ಭಾಗವಹಿಸುವಂತೆ ಕ್ರಮ ಜರುಗಿಸಲು ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ.ಎಂ. ಸೂಚನೆ ನೀಡಿದರು.

ಸಭೆಯಲ್ಲಿ ಯುವಜನ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ಶರಣು ಗೋಗೆರಿ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಂ.ಎ.ರಡ್ಡೇರ, ಪದವಿಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಡಾ.ಕೃಷ್ಣಪ್ಪ, ವಾರ್ತಾಧಿಕಾರಿ ವಸಂತ ಮಡ್ಲೂರ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

### ಮತದಾರರ ನೋಂದಣಿ ಜಾಗೃತಿ ಕಾರ್ಯಕ್ರಮದಲ್ಲಿ ಚಂದ್ರಶೇಖರ್ ಕುರ್ತಕೋಟಿ

# ಮತದಾರರ ಪಟ್ಟಿಯಲ್ಲಿ ಹೆಸರು ನೋಂದಾಯಿಸಿ

■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಸಾರ್ವಜನಿಕರು ಸೇರಿದಂತೆ ವಿಕಲಚೇತನರು ಸಹ ಮತದಾನದಿಂದ ವಂಚಿತರಾಗರಬಾರದು ಎಂಬ ಉದ್ದೇಶದಿಂದ, ಪ್ರತಿ ಗ್ರಾಮ ಮಟ್ಟದಲ್ಲಿಯೂ ಸಹ ಹೊಸ ಮತದಾರರು ಮತದಾರ ಪಟ್ಟಿಯಲ್ಲಿ ತಪ್ಪದೇ ಹೆಸರು ನೋಂದಾಯಿಸಿಕೊಳ್ಳಬೇಕು ಎಂದು ತಾ.ಪಂ. ಸಹಾಯಕ ನಿರ್ದೇಶಕ ಚಂದ್ರಶೇಖರ್ ಕುರ್ತಕೋಟಿ ಹೇಳಿದರು.




ಮಂಗಳವಾರ ತಾಲೂಕು ಪಂಚಾಯಿತಿ ಸಭಾಭವನದಲ್ಲಿ ಹುಬ್ಬಳ್ಳಿ ತಾಲ್ಲೂಕು ಆಡಳಿತ, ತಾಲ್ಲೂಕು ಪಂಚಾಯತ್, ಜಿಲ್ಲಾ ಆಡಳಿತ ಹಾಗೂ ಜಿಲ್ಲಾ ಸ್ವೀಪ್ ಸಮಿತಿ ಧಾರವಾಡ ಇವರ ವತಿಯಿಂದ ನಡೆದ ಮತದಾರರ ನೋಂದಣಿ ಜಾಗೃತಿ ಕಾರ್ಯಕ್ರಮದಲ್ಲಿ ಮತದಾರರ ಪ್ರತಿಜ್ಞಾ ವಿಧಿ ಬೋಧಿಸಿ ಅವರು ಮಾತನಾಡಿದರು.

ಯಾವುದೇ ಚುನಾವಣೆಯಲ್ಲಿ, ಪ್ರಜೆಗಳು ಮತದಾನದಿಂದ ದೂರ ಉಳಿಯಬಾರದು. ತಮ್ಮ ಹಕ್ಕನ್ನು ಮತದಾನ ಮಾಡುವ ಮೂಲಕ ಚಲಾಯಿಸಬೇಕು ಮತ್ತು ಪ್ರಜಾಪ್ರಭುತ್ವ ವ್ಯವಸ್ಥೆಯ ಮೌಲ್ಯವನ್ನು ಎತ್ತಿಹಿಡಿಯಲು ಅಂಗವಿಕಲರ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರು ಜಾಗೃತಿ ಮೂಡಿಸಿ, ಪ್ರತಿಯೊಬ್ಬರೂ ಮತದಾರರ ಪಟ್ಟಿಯಲ್ಲಿ ಹೆಸರು ನೋಂದಾಯಿಸಿಕೊಳ್ಳುವಂತೆ ಪ್ರೇರೇಪಿಸಬೇಕು ಎಂದರು.

ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ಡಾ. ಎಸ್.ವಿ. ಬಂಗಾರಿಮಠ ಮಾತನಾಡಿ, ಯಾವುದೇ ಚುನಾವಣೆಯಲ್ಲಿ ಗರಿಷ್ಠ ಮತದಾನವಾಗಬೇಕು ಮತ್ತು ಒಂದೇ ಒಂದು ಮತವೂ ನಿರ್ಣಾಯಕವಾಗಿರುವುದರಿಂದ 18 ವರ್ಷ ಮೇಲ್ಪಟ್ಟ ವಿಕಲಚೇತನ ಯುವಕ–ಯುವತಿಯರಿಗೆ ಮತದಾರರ ನೋಂದಣಿ ಪ್ರಕ್ರಿಯೆಯನ್ನು ಹುಬ್ಬಳ್ಳಿ ತಾಲ್ಲೂಕು ಪಂಚಾಯಿತಿ ವತಿಯಿಂದ ಆರಂಭಿಸಿದೆ. ಹೊಸ ಮತದಾರರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಈ ಸಂದರ್ಭದಲ್ಲಿ ತಾ.ಪಂ. ವ್ಯವಸ್ಥಾಪಕ ಶಿವಾನಂದ ನಸಬಿ, ತಾ.ಪಂ ವಿವಿದೋದ್ದೇಶ ಪುನರ್ವಸತಿ ಕಾರ್ಯಕರ್ತ ಮಹಾಂತೇಶ ಕುರ್ತಕೋಟಿ, ಎಲ್ಲ ಗ್ರಾ.ಪಂ ಗ್ರಾಮೀಣ ಅಂಗವಿಕಲರ ಪುನರ್ವಸತಿ ಕಾರ್ಯಕರ್ತರು ಉಪಸ್ಥಿತರಿದ್ದರು.

## ರಾಜ್ಯದಲ್ಲಿ 60 ವರ್ಷ ಮೇಲ್ಪಟ್ಟವರು, ದೀರ್ಘವ್ಯಾಧಿಯಿಂದ ಬಳಲುತ್ತಿರುವವರಿಗೆ ಜಿಲ್ಲಾಸ್ಪತ್ರೆಗಳಲ್ಲಿ ಕೋವಿಡ್ ಲಸಿಕೆ!

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ರಾಜ್ಯದಲ್ಲಿ ಕೋವಿಡ್ ಜೆನ್-1 ಉಪ ತಳಿ ಪ್ರಕರಣಗಳ ಏರಿಕೆ ಹಿನ್ನೆಲೆಯಲ್ಲಿ ಜನವರಿ 3 ರಿಂದ 60 ವರ್ಷ ಮೇಲ್ಪಟ್ಟವರು ಹಾಗೂ ದೀರ್ಘವ್ಯಾಧಿ (ಕೊಮೊರ್ಬಿಡಿಟಿ) ಬಳಲುತ್ತಿರುವವರು ಜಿಲ್ಲಾ ಆಸ್ಪತ್ರೆಗಳಲ್ಲಿ ಲಸಿಕೆ ಪಡೆದುಕೊಳ್ಳಬಹುದು ಎಂದು ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣ್ ಪ್ರಕಾಶ್ ಪಾಟೀಲ್ ತಿಳಿಸಿದ್ದಾರೆ. ಆದಾಗ್ಯೂ, ಜನರು ಭಯಪಡುವ ಅಗತ್ಯವಿಲ್ಲ, ವೈರಸ್ ಹರಡುವಿಕೆ ತಡೆಗೆ ಮುನ್ನೆಚ್ಚರಿಕೆ ಕ್ರಮಗಳನ್ನು ತೆಗೆದುಕೊಳ್ಳುವಂತೆ ಸಚಿವರು ತಿಳಿಸಿದರು.

ಕೋವಿಡ್-19 ತಾಂತ್ರಿಕ ಸಲಹಾ ಸಮಿತಿಯ ಮುಖ್ಯಸ್ಥರು ಮತ್ತು ಅದರ ಸದಸ್ಯರು ಮತ್ತು ವೈದ್ಯಕೀಯ ಶಿಕ್ಷಣ ಇಲಾಖೆಯ ವ್ಯಾಪ್ತಿಗೆ ಬರುವ ವೈದ್ಯಕೀಯ ಸಂಸ್ಥೆಗಳು, ಆಸ್ಪತ್ರೆಗಳ ಮುಖ್ಯಸ್ಥರೊಂದಿಗೆ ಮಂಗಳವಾರ ಸಭೆ ನಡೆಸಿದ

ಪಾಟೀಲ್, ಸದ್ಯದ ಪರಿಸ್ಥಿತಿ ಮತ್ತು ರಾಜ್ಯದಲ್ಲಿ ಕೋವಿಡ್-19 ನಿಭಾಯಿಸಲು ಕೈಗೊಳ್ಳಲಾಗಿರುವ ಸಿದ್ಧತೆಯನ್ನು ಪರಾಮರ್ಶಿಸಿದರು.

ಸಭೆಯ ನಂತರ ಮಾತನಾಡಿದ ಸಚಿವರು, ಹೊಸ ಲಸಿಕೆಗಳ ಬಗ್ಗೆ ಕೇಂದ್ರ ಸರ್ಕಾರದಿಂದ ಯಾವುದೇ ನಿರ್ದಿಷ್ಟ ನಿರ್ದೇಶನ ಬಂದಿಲ್ಲ. ಸಾಂಕ್ರಾಮಿಕ ರೋಗದ ಮೊದಲ ಮತ್ತು ಎರಡನೇ ಅಲೆ ವೇಳೆ ನೀಡಲಾದ ಲಸಿಕೆಗಳನ್ನೇ ನೀಡುತ್ತೇವೆ ಮತ್ತು 60 ವರ್ಷಕ್ಕಿಂತ ಮೇಲ್ಪಟ್ಟ ಜನರು ಮತ್ತು ಕೊಮೊರ್ಬಿಡಿಟಿ ಇರುವವರು ಬುಧವಾರದಿಂದ ಜಿಲ್ಲಾ ಆಸ್ಪತ್ರೆಗಳಲ್ಲಿ ಲಸಿಕೆಯನ್ನು ಪಡೆಯಬಹುದು ಎಂದು ಹೇಳಿದರು.

ಇಂದು ಬೆಂಗಳೂರಿನ ವಿಕಾಸಸೌಧದಲ್ಲಿ ವೈದ್ಯಕೀಯ ಶಿಕ್ಷಣ ಇಲಾಖಾ ವ್ಯಾಪ್ತಿಗೆ ಒಳಪಡುವ ವಿವಿಧ ಆಸ್ಪತ್ರೆಗಳ ಮುಖ್ಯಸ್ಥರು, ಕೋವಿಡ್ ತಾಂತ್ರಿಕ ಸಲಹಾ ಸಮಿತಿ ಅಧ್ಯಕ್ಷರು, ಸದಸ್ಯರ ಜೊತೆ ಸಭೆ ನಡೆಸಿ, ಪ್ರಸ್ತುತ ರಾಜ್ಯದಲ್ಲಿ ಕೋವಿಡ್ -19 ನಿಯಂತ್ರಣ ಹಾಗೂ ಪೂರ್ವ ಸಿದ್ಧತೆಗಳ ಕುರಿತು ಮಾಹಿತಿ ಪಡೆದುಕೊಂಡೆ.

ಜೆಎನ್ -1 ರೂಪಾಂತರವು ವೇಗವಾಗಿ ಹರಡುವ ಸಾಧ್ಯತೆಯಿದೆ ಆದರೆ ಗಂಭೀರ ಆರೋಗ್ಯ ಸಮಸ್ಯೆಗಳನ್ನು ಉಂಟುಮಾಡುವ ಸಾಧ್ಯತೆಯಿಲ್ಲ ಎಂದು ತಜ್ಞರು ಅಭಿಪ್ರಾಯಪಟ್ಟಿದ್ದಾರೆ. ಹಾಗಾಗಿ ಗಾಬರಿಯಾಗುವ ಅಗತ್ಯವಿರಲಿಲ್ಲ.ಮಾಸ್ಕ್‌ಗಳನ್ನು ಕಡ್ಡಾಯಗೊಳಿಸಿ ಸರ್ಕಾರ ಆದೇಶ ಹೊರಡಿಸಲ್ಲ ಆದರೆ ಜನಸಂದಣಿ ಇರುವ ಸ್ಥಳಗಳಲ್ಲಿ ಜನರು ಜಾಗರೂಕರಾಗಿರಬೇಕು ಎಂದು ಅವರು ಹೇಳಿದರು.

### ಅಶಿಕ್ಷಿತರ ಪಾಲಿನ ನಿಜ ಸರಸ್ವತಿ, ಹೆಣ್ಣು ಮಕ್ಕಳ ಶಿಕ್ಷಣಕ್ಕೆ ಬುನಾದಿ ಹಾಕಿದ ದಿಟ್ಟೆ

# ಅಕ್ಷರದವ್ವ ಸಾವಿತ್ರಿಬಾಯಿ ಫುಲೆ

ಕ್ರಾಂತಿ ಜ್ಯೋತಿ, ದೇಶದ ಮೊದಲ ಮಹಿಳಾ ಶಿಕ್ಷಕಿ, ಅಶಿಕ್ಷಿತರ ಪಾಲಿನ ನಿಜ ಸರಸ್ವತಿ, ಹೆಣ್ಣು ಮಕ್ಕಳ ಶಿಕ್ಷಣಕ್ಕೆ ಭದ್ರ ಬುನಾದಿ ಹಾಕಿದ ವೀರ ವನಿತೆ, ಬಾಲ್ಯ ವಿವಾಹ, ಸತಿ ಸಹಗಮನ ಪದ್ಧತಿ, ಕೇಶ ಮುಂಡನದಂತಹ ಅನಿಷ್ಟಗಳ ವಿರುದ್ಧ ನಿರಂತರ ಹೋರಾಟ ಮಾಡಿದ ಧೀರೆ, ಧೀಮಂತೆ ಸಾವಿತ್ರಿಬಾಯಿ ಫುಲೆ ಜನಿಸಿದ ಭಾಗ್ಯ ದಿನವಿಂದು. ಇಡೀ ಭಾರತ ಇಂದು ಅವರ 192ನೇ ಜಯಂತಿಯನ್ನು ಅಭಿಮಾನದಿಂದ ಆಚರಿಸುತ್ತಿದೆ.

ಜನವರಿ 3, 1831ರಲ್ಲಿ ಮಹಾರಾಷ್ಟ್ರದ ನೈಗಾಂವ್ ಹಳ್ಳಿಯ ಅತ್ಯಂತ ಹಿಂದುಳಿದ ಮಾಲಿ ಸಮುದಾಯದ ರೈತ ಕುಟುಂಬದಲ್ಲಿ ಸಾವಿತ್ರಿಬಾಯಿ ಜನಿಸಿದರು. ಬದುಕು ಆರಂಭವಾಗುವ ಮುನ್ನವೇ ಆಡಿ ನಲಿದಾಡಬೇಕಾದ ಹುಡುಗಿ ವಿವಾಹ ಜೀವನಕ್ಕೆ ಅಡಿಯಿಡಬೇಕಾಗುತ್ತದೆ. ಬಾಲಕಿ ಸಾವಿತ್ರಿ ಕೇವಲ 9ನೇ ವಯಸ್ಸಿನಲ್ಲಿ ಇರುವಾಗಲೇ 13 ವರ್ಷದ ಜ್ಯೋತಿಬಾ ಫುಲೆ ಅವರೊಂದಿಗೆ ಬಾಲ್ಯ ವಿವಾಹವಾಗುತ್ತಾರೆ.

ಶಿಕ್ಷಣದ ಮೂಲಕವೇ ಸಾಮಾಜಿಕ ಅಸಮಾನತೆಯನ್ನು ತೊಡೆದುಹಾಕಬಹುದು ಎಂದು ಬಲವಾಗಿ ನಂಬಿದ್ದ ಸಾವಿತ್ರಿಬಾಯಿಯವರ ಪತಿ ಜ್ಯೋತಿಭಾ ಮೊದಲು ತಮ್ಮ ಪತ್ನಿಗೆ ಶಿಕ್ಷಣವನ್ನು ಕಲಿಸಲು ಆರಂಭಿಸಿದರು. ಮನೆಯಲ್ಲಿ ಕಲಿಸಲು ಅಸಾಧ್ಯ ಎಂಬುದನ್ನು ಗಮನಿಸಿ, ತಾವು ಹೊಲದಲ್ಲಿ ಕೆಲಸ ಮಾಡುವಾಗ ಬುತ್ತಿ ಹೊತ್ತು ತರುತ್ತಿದ್ದ ಪತ್ನಿಗೆ ಅಲ್ಲಿಯೇ ಮರದ ನೆರಳಿನಲ್ಲಿ ವಿದ್ಯಾಭ್ಯಾಸ ಮಾಡಿಸತೊಡಗಿದರು.

ಮದುವೆಯ ನಂತರವೂ ಜ್ಯೋತಿಬಾ ತಮ್ಮ ವಿದ್ಯಾಭ್ಯಾಸವನ್ನು ಮುಂದುವರಿಸಿದರು. ಜೊತೆಗೆ ಮನೆಯಲ್ಲಿ ತಮ್ಮ ಪತ್ನಿಗೆ ಆರಂಭಿಕ ಶಿಕ್ಷಣವನ್ನು ಸ್ವತಃ ತಾವೇ ನೀಡಿದರು. ಮಹಿಳೆಯರಿಗೆ ಮತ್ತು ದಮನಿತರಿಗೆ ಶಿಕ್ಷಣ ನೀಡುತ್ತಿದ್ದ ಫುಲೆ ದಂಪತಿಗಳ ಪ್ರಯತ್ನ ಪಟ್ಟಭದ್ರರ ಕೆಂಗಣ್ಣಿಗೆ ಗುರಿಯಾಗಿ ಇವರ ಬಗ್ಗೆ ವಯಕ್ತಿಕವಾಗಿ ಅಪಪ್ರಚಾರವನ್ನು ಆರಂಭಿಸಿದರು. ಆದರೆ ಈ ಗೊಡ್ಡು ಬೆದರಿಕೆಗಳಿಗೆ ಸಾವಿತ್ರಿಬಾಯಿಯವರು ಮಣಿಯದಿದ್ದಾಗ, ಅವರನ್ನು ಅತ್ಯಂತ ಕೆಟ್ಟ ಭಾಷೆಗಳಲ್ಲಿ ನಿಂದಿಸತೊಡಗಿದರು.

ಸ್ನೇಹಿತರ ಸಹಕಾರದಿಂದ 1848-1852ರಷ್ಟರಲ್ಲಿ ಜ್ಯೋತಿಭಾ



ಮತ್ತು ಸಾವಿತ್ರಿಬಾಯಿ ಫುಲೆ ದಂಪತಿಗಳು ಮಹಿಳೆಯರಿಗಾಗಿಯೇ ಒಟ್ಟು 18 ಶಾಲೆಗಳನ್ನು ಆರಂಭಿಸಿದ್ದರು. 1852ರಲ್ಲಿ ಶಿಕ್ಷಣ ಕ್ಷೇತ್ರದಲ್ಲಿ ಹಲವಾರು ಮಹತ್ತರ ಸಾಧನೆಗಳನ್ನು ಸಾದಿಸಿದ್ದನ್ನು ಗುರುತಿಸಿದ ಅಂದಿನ ಬ್ರಿಟಿಷ್ ಸರ್ಕಾರ ಜ್ಯೋತಿಬಾರವರವನ್ನು ಸನ್ಮಾನಿಸುವ ಕಾರ್ಯಕ್ರಮ ಏರ್ಪಡಿಸಿತು. ಅದೇ ಸಮಾರಂಭದಲ್ಲಿಯೇ ಸಾವಿತ್ರಿಬಾಯಿಯವರು 'ಅತ್ಯುತ್ತಮ ಶಿಕ್ಷಕಿ' ಎಂಬ ಗೌರವಕ್ಕೆ ಪಾತ್ರರಾದರು.

ಮುಂದೆ ಸಾವಿತ್ರಿಬಾಯಿ ಹಾಗೂ ಜ್ಯೋತಿಭಾ ದಂಪತಿಗಳು ಶಿಕ್ಷಣ ವಂಚಿತ ಕೃಷಿಕ ಮತ್ತು ಕಾರ್ಮಿಕ ವರ್ಗದ ಮಹಿಳೆಯರು ಮತ್ತು ಅವರ ಮಕ್ಕಳಿಗಾಗಿ 1855ರಲ್ಲಿ ರಾತ್ರಿ ಶಾಲೆಯನ್ನು ಆರಂಭಿಸಿದರು. ಆರ್ಥಿಕವಾಗಿ ಸಬಲರಲ್ಲದವರಿಗೂ ಶಿಕ್ಷಣಕ್ಕೆ ಉತ್ತೇಜನ ಕೊಡಲು ಮಹಾರಾಷ್ಟ್ರದಾದ್ಯಂತ ಒಟ್ಟು 52 ಉಚಿತ ವಸತಿ ನಿಲಯಗಳನ್ನು ಸ್ಥಾಪಿಸಿ ಶಿಕ್ಷಣ ಕ್ಷೇತ್ರದಲ್ಲಿ ಕ್ರಾಂತಿಯ ಕಹಳೆ ಮೊಳಗಿಸಿದರು.

ಸಮಾಜೋಪಯೋಗಿ ಕಾರ್ಯಗಳಲ್ಲಿ ತಮ್ಮನ್ನು ತಾವು ಅರ್ಪಿಸಿಕೊಂಡಿದ್ದ ಫುಲೆ ದಂಪತಿಗಳಿಗೆ ಮಕ್ಕಳಿರಲಿಲ್ಲ. ಕಾರಣ ದಂಪತಿಗಳು ಒಬ್ಬ ವಿಧವೆಗೆ ಜನಿಸಿದ ಯಶವಂತ ರಾವ್ ಎಂಬ ಬಾಲಕನನ್ನು ದತ್ತು ಪಡೆದರು. ಅವನಿಗೆ ಒಳ್ಳೆಯ ವಿದ್ಯಾಭ್ಯಾಸ ಕೊಡಿಸಿದರು. ವೈದ್ಯನನ್ನಾಗಿಸಿದರು. ಮುಂದೆ ಯಶವಂತ್ ಸಹಾ ಅಂತರ್ಜಾತಿಯ ವಿವಾಹವಾಗುವ ಮೂಲಕ ತಮ್ಮ ಸತ್ಯಶೋಧಕ ಸಂಸ್ಥೆಯ ಸಂಪ್ರದಾಯವನ್ನು ಮುಂದುವರೆಸಿಕೊಂಡು ಹೋದರು. ವೈದ್ಯನಾಗಿ ಸಮಾಜೋದ್ಧಾರದ ತನ್ನ ತಂದೆ ತಾಯಿಯರ ದಿವ್ಯ ಕಾರ್ಯಕ್ಕೆ ತಾನೂ ಹೆಗಲು ನೀಡಿದರು.

1892ರಲ್ಲಿ ಇಡೀ ಮಹಾರಾಷ್ಟ್ರಕ್ಕೆ ಪ್ಲೇಗ್ ಮಹಾಮಾರಿ ಆವರಿಸಿತು. ಅದಕ್ಕೆ ತಕ್ಷಣವೇ ಸ್ಪಂದಿಸಿದ ಸಾವಿತ್ರಿಬಾಯಿಯವರು ತಮ್ಮ ವೈದ್ಯ ಮಗನೊಂದಿಗೆ ಒಂದು ಆಸ್ಪತ್ರೆ ಪ್ರಾರಂಭಿಸಿ ಅಲ್ಲಿನ ರೋಗಿಗಳ ಆರೈಕೆಗೆ ತಮ್ಮನ್ನು ಸಂಪೂರ್ಣವಾಗಿ ತೊಡಗಿಸಿಕೊಂಡರು. ರೋಗಿಗಳಲ್ಲದೇ ಅವರ ಕುಟುಂಬವರ್ಗದವರು ಸೇರಿದಂತೆ ಪ್ರತಿ ದಿನ ಸುಮಾರು 2 ಸಾವಿರ ಜನರಿಗೆ ಉಚಿತ ಊಟದ ವ್ಯವಸ್ಥೆ ಮಾಡಿಸಿದ್ದರು.

ಇದೇ ಕಾರ್ಯದಲ್ಲಿ ನಿರತರಾಗಿದ್ದಾಗ ಅದೊಂದು ದಿನ, 10 ವರ್ಷದ ಪ್ಲೇಗ್ ಪೀಡಿತ ಮಗುವೊಂದನ್ನು ಆಸ್ಪತ್ರೆಗೆ ಸ್ವತಃ ಎತ್ತಿಕೊಂಡು ಹೋಗುವಾಗ ಸಾವಿತ್ರಿಯವರಿಗೂ ಸೋಂಕು ತಗುಲಿತು. ಚಿಕಿತ್ಸೆ ಮಾಡಲಾಯಿತು. ಆದರೆ ಅದು ಪರಿಣಮಕಾರಿಯಾಗಲಿಲ್ಲ. 1897ರ ಮಾರ್ಚ್ 10ರಂದು ತಮ್ಮ 67ನೇ ವಯಸ್ಸಿನಲ್ಲಿ ದಣಿವರಿಯದೆ ದಮನಿತರ ಬದುಕಿಗಾಗಿ ದುಡಿದ ಆ ದಿವ್ಯ ಚೇತನ ಸಾವಿತ್ರಿಬಾಯಿ ಫುಲೆ ತಮ್ಮ ಕೊನೆಯುಸಿರೆಳೆದರು.

ಶಿಕ್ಷಣ ಕ್ಷೇತ್ರದಲ್ಲಿ ಅಪಾರವಾದ ಸೇವೆಯನ್ನು ಸಲ್ಲಿಸಿದ್ದ ಸಾವಿತ್ರಿಬಾಯಿ ಫುಲೆಯವರ ಸ್ಮರಣಾರ್ಥ ಪುಣೆ ವಿಶ್ವವಿದ್ಯಾಲಯವನ್ನು 2015ರಲ್ಲಿ 'ಸಾವಿತ್ರಿಬಾಯಿ ಫುಲೆ ಪುಣೆ ವಿಶ್ವವಿದ್ಯಾಲಯ' ಎಂದು ಮರುನಾಮಕರಣ ಮಾಡಿತು. ಅವರ ಜನ್ಮ ದಿನವಾದ ಜನವರಿ 3ನ್ನು 'ಬಾಲಿಕಾ ದಿನ' ಎಂದು ಮಹಾರಾಷ್ಟ್ರದಾದ್ಯಂತ ಆಚರಣೆಗೆ ತರಲಾಯಿತು.



– ಈಶ್ವರ ಎಸ್.ಮೆಡ್ಲೇರಿ.
ಅಧ್ಯಕ್ಷರು ಕಸಾಪ, ಲಕ್ಷ್ಮೇಶ್ವರ.



■ ವಿಜಯಸಾಕ್ಷಿ ಸುದ್ದಿ, ಗದಗ

ಡಾ. ಬಿ.ಆರ್. ಅಂಬೇಡ್ಕರ್ ನಗರದಲ್ಲಿ 206ನೇ ಭೀಮಾ ಕೋರೆಂಗಾವ್ ವಿಜಯೋತ್ಸವವನ್ನು ಆಚರಿಸಲಾಯಿತು. ಡಾ. ಬಿ.ಆರ್. ಅಂಬೇಡ್ಕರ್ ಹಾಗೂ ಭೀಮಾ ಕೋರೆಂಗಾವ್ ವಿಜಯ ಸ್ಥಂಭದ ಭಾವಚಿತ್ರಗಳಿಗೆ ಮಾಲಾರ್ಪಣೆ ಮಾಡಿ ಸಿಹಿ ವಿತರಿಸಿದರು. ಈ ಸಂದರ್ಭದಲ್ಲಿ ಓಣಿಯ ಹಿರಿಯರು, ಮಹಿಳೆಯರು, ಯುವಕರು ಉಪಸ್ಥಿತರಿದ್ದರು.

# ಸಿದ್ಧಗಂಗಾ ಶ್ರೀಗಳಿಂದ ಹೊರಟ್ಟಿಯವರಿಗೆ ಶ್ರೀರಕ್ಷೆ

■ ವಿಜಯಸಾಕ್ಷಿ ಸುದ್ದಿ, ಗದಗ

ಶ್ರೀ ಕ್ಷೇತ್ರ ತುಮಕೂರು ಸಿದ್ದಗಂಗಾ ಮಠದ ಪೀಠಾಧ್ಯಕ್ಷರಾದ ಸಿದ್ಧಲಿಂಗ ಸ್ವಾಮಿಗಳಿಂದ ಗೌರವ ಶ್ರೀರಕ್ಷೆ ಪಡೆದದ್ದು ನನ್ನ ಸೌಭಾಗ್ಯ ಎಂದು ಸಭಾಪತಿ ಬಸವರಾಜ್ ಹೊರಟ್ಟಿ ಅಭಿಪ್ರಾಯಪಟ್ಟರು.

ಸಿದ್ಧಗಂಗಾ ಮಠದ ಪೀಠಾಧ್ಯಕ್ಷರಾದ ಸಿದ್ಧಲಿಂಗ ಶ್ರೀಗಳನ್ನು ಭೇಟಿಯಾಗಿ ಆಶೀರ್ವಾದ ಪಡೆದು ಕುಶಲೋಪರಿಯನ್ನ ಹಂಚಿಕೊಂಡ ಬಸವರಾಜ ಹೊರಟ್ಟಿ, ಕಳೆದ ಅರ್ಧ ಶರ್ಮಾನಕ್ಕೂ ಹೆಚ್ಚು ಕಾಲ ಶ್ರೀಮಠದೊಂದಿಗೆ ನನ್ನ



ಒಡನಾಟ ಇದೆ. ನಾಡಿನಲ್ಲಿ ಅತ್ಯಂತ ಶ್ರೇಷ್ಠವಾದ ಶ್ರೀಮಠ ಜನ ಮಾನಸದಲ್ಲಿ ತನ್ನದೇ ಆದ ಸುವರ್ಣ ಇತಿಹಾಸವನ್ನು ಹೊಂದಿದೆ. ಇಲ್ಲಿ ಓದುತ್ತಿರುವ 10 ಸಾವಿರಕ್ಕೂ ಹೆಚ್ಚು ಮಕ್ಕಳು ವಿವಿಧ ಜಾತಿ,ಮತ, ಪಂಥಗಳಿಂದ ಕೂಡಿದವರಾಗಿದ್ದಾರೆ. ಬಂದವರೆಲ್ಲರಿಗೂ ಅನ್ನ/ಆಶ್ರಯ ನೀಡಿ ಜ್ಞಾನದ ಜ್ಯೋತಿಯನ್ನು ಮೂಡಿಸಿದ್ದಾರೆ.

ಪ್ರಚಾರದಿಂದ ದೂರವಿದ್ದು ನುಡಿದಂತೆ ನಡೆಯುವ ಕಾಯಕದಲ್ಲಿಯೇ ನಂಬಿಕೆ ಇಟ್ಟ ನಾಡಿನ ಮುಂಚೂಣಿಯಲ್ಲಿರುವ ಏಕೈಕ ಮಾದರಿ ಮಠ ಇದಾಗಿದೆ. ಇಂತಹ ಪವಿತ್ರ ಮಠದ ನೆಲದಲ್ಲಿ ಹೊಸ ವರ್ಷದ ಮೊದಲನೇ ದಿನ ಗದ್ದುಗೆ ದರ್ಶನ ಪಡೆದು ಸಿದ್ದಲಿಂಗ ಶ್ರೀಗಳಿಂದ ಆಶೀರ್ವಾದ ಸಿಕ್ಕಿದ್ದು ನನ್ನ ಪಾಲಿಗೆ ಈ ದಿನ ಅತ್ಯಂತ ಸ್ಮರಣೀಯವಾದದ್ದು ಎಂದರು. ಇದೇ ಸಂದರ್ಭದಲ್ಲಿ ಶ್ರೀಗಳು ಸಭಾಪತಿ ಬಸವರಾಜ್ ಹೊರಟ್ಟಿ ಅವರನ್ನು ಸನ್ಮಾನಿಸಿ ಗೌರವಿಸಿದರು.

## ಹಾಲು ಉತ್ಪಾದಕರ ಸಂಘದ ವಾರ್ಷಿಕೋತ್ಸವ

■ ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಮೈನಹಳ್ಳಿಯ ಹಾಲು ಉತ್ಪಾದಕರ ಸಹಕಾರ ಸಂಘದಲ್ಲಿ ಸೋಮವಾರ ಒಂದನೇ ವರ್ಷದ ವಾರ್ಷಿಕೋತ್ಸವ ಸಮಾರಂಭವನ್ನು ಆಚರಿಸಲಾಯಿತು. ಸಂಘದ ಅಧ್ಯಕ್ಷ ಅಜಯ್ ಗೌಡ ಪಾಟೀಲ್ ಮೈನಹಳ್ಳಿ ಹಾಲು ಒಕ್ಕೂಟ ನಡೆದುಬಂದ ದಾರಿಯನ್ನು ಮೆಲುಕು ಹಾಕಿದರು.

ಜಿ.ಪಂ ಮಾಜಿ ಅಧ್ಯಕ್ಷ ಎಚ್.ಎಲ್. ಹಿರೇಗೌಡ್ರು, ಕೊಪ್ಪಳ ಜಿಲ್ಲಾ ಹಾಲು ಒಕ್ಕೂಟದ ಅಧ್ಯಕ್ಷ ವೆಂಕನಗೌಡ್ರು ಹಿರೇಗೌಡ್ರು, ಪ್ರಮುಖರಾದ ಮರಿಶಾಂತ ವೀರಸ್ವಾಮಿ ಚಕ್ಕಿಮಠ, ಮಹೇಂದ್ರಪ್ಪ ಮೂಲಿಮನಿ, ಚನ್ನಪ್ಪ ಹಳ್ಳಿ, ಶಿವಣ್ಣ ಹ್ಯಾಟಿ, ದೇವಣ್ಣ ಕತ್ತಿ, ಸಂಗಪ್ಪ ಬಾಸಿಂಗಾರ, ಶಂಕ್ರಪ್ಪ ಬಗನಾಳ, ಕೊಟ್ರಪ್ಪ ಬಳಿಗೇರಿ, ಷಣ್ಮುಖರಡ್ಡಿ ಕಿನ್ನಾಳ, ಆಂಜನೇಯ ಬೇಳೂರು, ಈಶಪ್ಪ ಹಳ್ಳಿ, ವಿದ್ಯಾಧರ ಹಿರೇಗೌಡ್ರು, ಉಮೇಶ್ ಮೂಲಿಮನಿ, ನಿಂಗಪ್ಪ ಕುಂಬಾರ, ಸಿದ್ದಲಿಂಗಯ್ಯ ಮುಂಡರಗಿಮಠ, ಶೇಖರಯ್ಯ ಕವಲೂರು, ರೇವಣಸಿದ್ದಪ್ಪ ಹರಿಜನ, ಯಂಕಮ್ಮ ಡಂಬ್ರಳ್ಳಿ, ಲಲಿತವ್ವ ಬಾಸಿಂಗದಾರ, ಪಾರಮ್ಮ ಬಗನಾಳ, ಗಂಗಮ್ಮ ತಳವಾರ, ಕೊಟ್ರೇಶ್ ಗುಡ್ಲಾನೂರ ಮುಂತಾದವರು ಉಪಸ್ಥಿತರಿದ್ದರು.

## ಪವಿತ್ರಾ ಬಾರಕೇರರಿಗೆ ಸನ್ಮಾನ



■ ವಿಜಯಸಾಕ್ಷಿ ಸುದ್ದಿ, ಧಾರವಾಡ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಧಾರವಾಡದ ಹಿರಿಯ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಬೆರಳಚ್ಚುಗಾರರಾಗಿ ಕರ್ತವ್ಯ ನಿರ್ವಹಿಸುತ್ತಿದ್ದ ಪವಿತ್ರಾ ಬಾರಕೇರ ಅವರಿಗೆ ಬೆಂಗಳೂರಿನ ಕೇಂದ್ರ ಕಚೇರಿಗೆ ವರ್ಗಾವಣೆಯಾಗಿದ್ದು, ಮಂಗಳವಾರ ಅವರನ್ನು ಸನ್ಮಾನಿಸಿ, ಬಿಳ್ಕೊಡಲಾಯಿತು.

ಹಿರಿಯ ಸಹಾಯಕ ನಿರ್ದೇಶಕ ಮಂಜುನಾಥ ಸುಳ್ಳೊಳ್ಳಿ ಸನ್ಮಾನಿಸಿದರು. ವಾರ್ತಾ ಸಹಾಯಕ ಅಧಿಕಾರಿ ಡಾ.ಸುರೇಶ ಹಿರೇಮಠ, ಪ್ರಥಮ ದರ್ಜೆ ಸಹಾಯಕಿ ಭಾರತಿ ಮಟ್ಟಿ ಮತ್ತು ಸಿಬ್ಬಂದಿಗಳಾದ ಮಲ್ಲಿಕಾರ್ಜುನ ಕಂಪಲಿ, ಎಂ.ಎಸ್. ಚೋಪದಾರ, ಸಂಗಪ್ಪಾ ಯರಗುದ್ದಿ, ಶಿವಾನಂದ ಭೋವಿ, ಛಾಯಾಗ್ರಾಹಕ ಬಸವರಾಜ ಪಟಾತ, ಡಿ. ದೇವು, ಸ್ಮಿತಾ ಅಂಗಡಿ ಮುಂತಾದವರಿದ್ದರು.

# ಮಕ್ಕಳ ಸಕಾರಾತ್ಮಕ ಶಕ್ತಿಗೆ ಸಂಸ್ಕಾರ ನೀಡಿ ಸದೃಡ ಸಮಾಜ ನಿರ್ಮಿಸಿ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಮಕ್ಕಳಲ್ಲಿ ಅಗಾಧ ಸಕಾರಾತ್ಮಕ ಶಕ್ತಿ ಇರುತ್ತದೆ. ಆ ಶಕ್ತಿಗೆ ಒಳ್ಳೆಯ ಸಂಸ್ಕಾರ ನೀಡುವಂತಾದಲ್ಲಿ, ಸದೃಢ ಸಮಾಜ ನಿರ್ಮಿಸಲು ಸಾಧ್ಯ ಎಂದು ಸಾರ್ವಜನಿಕ ಶಿಕ್ಷಣ ಇಲಾಖೆಯ ವಿಶ್ರಾಂತ ಉಪನಿರ್ದೇಶಕ ಆರ್.ಸಿ. ಹಲಗತ್ತಿ ಅಭಿಪ್ರಾಯಪಟ್ಟರು.

ಅವರು ಚಿಲಿಪಿಲಿ ಮಕ್ಕಳ ಶಿಕ್ಷಣ ಹಾಗೂ ಮಕ್ಕಳ ಸರ್ವಾಂಗೀಣ ಅಭಿವೃದ್ಧಿ ಸಂಸ್ಥೆಯು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಸಾವಿತ್ರಿಬಾಯಿ ಫುಲೆ ಜನ್ಮದಿನದ ಅಂಗವಾಗಿ ಆಯೋಜಿಸಿದ್ದ ವಿಶೇಷ ಮಕ್ಕಳ ಪ್ರತಿಭೋತ್ಸವ ಹಾಗೂ ಸಾವಿತ್ರಿಬಾಯಿ ಫುಲೆ ಶ್ರೇಷ್ಠ ಸೇವಾ ಶಿಕ್ಷಕಿ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು.

ಇಂದು ಪ್ರಶಸ್ತಿಗಳನ್ನು ಬೆನ್ನು ಹತ್ತಿ ಹೋಗುವ ಕಾಲ. ಇಂಥದರಲ್ಲಿ ಯಾವ ಫಲಾಪೇಕ್ಷೆ ಇಲ್ಲದೇ ವಿಶೇಷ ಮಕ್ಕಳ ಸೇವೆ ಸಲ್ಲಿಸುತ್ತಿರುವ ಮಹಿಳೆಯರನ್ನು ಗುರುತಿಸಿ ಪ್ರಶಸ್ತಿ ನೀಡುತ್ತಿರುವ ಕಾರ್ಯ ಸಮಾಜಕ್ಕೆ ಮಾದರಿಯಾಗಿದೆ. ಇಂಥ ನಿಸ್ವಾರ್ಥದಿಂದ ಕೂಡಿದ ಕಾರ್ಯಕ್ರಮ ಅಭಿನಂದನೀಯ ಎಂದರು.

ಪ್ರಶಸ್ತಿ ಪ್ರದಾನ ಮಾಡಿದ ಧಾರವಾಡ ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷೆ ರಾಜೇಶ್ವರಿ ಸಾಲಗಟ್ಟಿ ಮಾತನಾಡಿ, ಪ್ರಶಸ್ತಿ ಪುರಸ್ಕೃತೆ ಜಾಹೀದಾ ಕಾಲೇಖಾನವರ



ಸರಕಾರಿ ಸೇವೆಯಲ್ಲಿ ಇದ್ದಾಗೂ ಮಕ್ಕಳ ಕಲ್ಯಾಣಕ್ಕಾಗಿ ನಿಯಮಾವಳಿಗಳನ್ನು ಬದಿಗಿಟ್ಟು ಕಾರ್ಯಮಾಡಿದ್ದರಿಂದ ಇಂದು ಉಣಕಲ್ಲ ಮನೋವೈಕಲ್ಯದ ಬಾಲಕಿಯರ ಬಾಲಮಂದಿರ ಮಾದರಿಯ ಬಾಲಮಂದಿರವಾಗಿರುವಂತೆ ಮಾಡಿದ್ದರಿಂದ ಇವರನ್ನು ಪ್ರಶಸ್ತಿ ಅರಿಸಿಬಂದಿದೆ. ಇವರಿಗೆ ಪ್ರಶಸ್ತಿ ನೀಡುವ ಮೂಲಕ ಪ್ರಶಸ್ತಿ ಮೌಲ್ಯ ಹೆಚ್ಚಿದೆ ಎಂದರು.

ಅತಿಥಿಯಾಗಿ ಭಾಗವಹಿಸಿ ಶೈಕ್ಷಣಿಕ ಚಿಂತಕ ಮಲ್ಲಿಕಾರ್ಜುನ ಚಿಕ್ಕಮಠ ಮಾತನಾಡಿ, ಸಾವಿತ್ರಿಬಾಯಿ ಫುಲೆ ಅಕ್ಷರ ಕಲಿತು ಅಕ್ಷರ ವಂಚಿತ ವಿಧವಾ ಹೆಣ್ಣು ಮಕ್ಕಳಿಗೆ ಶಿಕ್ಷಣ ನೀಡುವ ಮೂಲಕ ಅಕ್ಷರ ಕ್ರಾಂತಿಯನ್ನೇ ಮಾಡಿದ ತಾಯಿಯ ಹೆಸರಿನಲ್ಲಿ ಪ್ರಶಸ್ತಿ ಸ್ವೀಕರಿಸುವುದೆಂದರೆ ಇನ್ನಷ್ಟು ಛಲದಿಂದ ಕಾರ್ಯಮಾಡಲು ಪಣತೊಡುವುದು ಎಂದರ್ಥ. ಶಿಕ್ಷಣ ಕ್ಷೇತ್ರ ಇಂದು ಹೆಜ್ಜೆ ಹೆಜ್ಜೆಗೂ ಒತ್ತಡದಲ್ಲಿದೆ. ಮಕ್ಕಳಿಗೆ ಎಂಥ ಶಿಕ್ಷಣ ನೀಡಬೇಕು ಎಂದು ಗೊಂದಲದಲ್ಲಿದ್ದೇವೆ. ಇಂಥ ಸಂದರ್ಭದಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯು ಬಾಲಮಂದಿರದಲ್ಲಿಯ ವಿಶೇಷ ಮಕ್ಕಳ ಏಳ್ಗೆಗೆ ಸದ್ದು ಗದ್ದಲವಿಲ್ಲದೆ ಕಾರ್ಯಮಾಡುತ್ತಿರುವುದು ಅಭಿನಂದನೀಯ ಎಂದರು.

ಇನ್ನೊರ್ವ ಅತಿಥಿ 'ಸ್ನೇಹ' ಮಕ್ಕಳ ತೆರೆದ ತಂಗುದಾಣದ ಮುಖ್ಯಸ್ಥೆ ನಾಗರತ್ನಾ ಎಸ್. ಜಡೇದ ಮಾತನಾಡುತ್ತಾ, ಯಾರ ಹೆಸರಿನಲ್ಲಿ ಪ್ರಶಸ್ತಿ ಪಡೆಯುತ್ತೇವೆಯೋ ಅವರ ಹೆಸರಿಗೆ ಚ್ಯುತಿ ಬರದ ಹಾಗೆ ಪ್ರಶಸ್ತಿ ಪಡೆದವರ ಜವಾಬ್ದಾರಿ ಹೆಚ್ಚುತ್ತದೆ. ಅಂಥ ಜವಾಬ್ದಾರಿಯಿಂದ ಇನ್ನಷ್ಟು ಶ್ರೇಷ್ಠ ಸೇವೆ ಸಲ್ಲಿಸಲು ಸಾಧ್ಯವಾಗುತ್ತದೆ ಎಂದರು.

ಚೇತನಾ ಹಲಗತ್ತಿ ಮಾತನಾಡುತ್ತಾ, ಮನೆಯನ್ನು ಹೇಗೆ ನಿಭಾಯಿಸುವ ಶಕ್ತಿ ಇದೆಯೋ ಹಾಗೆಯೇ ಹೊರಗಿನ ಜಗತ್ತಿನ ಜವಾಬ್ದಾರಿಯನ್ನು ನೀಡಿದಲ್ಲಿ ಹೆಣ್ಣು ಮನೆಯಂತೆ ನಿಬಾಯಿಸಬಲ್ಲಳು ಎಂದರು.

ದೀಪ್ತಿ ಪಾಟೀಲ ಪ್ರಾರ್ಥಿಸಿದರು. ಶಂಕರ ಹಲಗತ್ತಿ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ವಿ.ಎನ್ ಕೀರ್ತಿವತಿ ಕಾರ್ಯಕ್ರಮ ನಡೆಸಿಕೊಟ್ಟರು. ಪ್ರಕಾಶ ಬಾಳಿಕಾಯಿ ವಂದಿಸಿದರು.

ಸಭೆಯಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿಗಳು ಇದ್ದರು. ಕೆ.ಎಚ್ ನಾಯಕ, ಚಂದ್ರಶೇಖರ ಸಬರದ, ಡಾ. ಎ.ಎಲ್ ದೇಸಾಯಿ ಮುಂತಾದವರು ಭಾಗವಹಿಸಿದರು.

ಸ್ನೇಹ ಮಕ್ಕಳ ತೆರೆದ ತಂಗುದಾಣದ ಮಕ್ಕಳು ಮತ್ತು ಹುಬ್ಬಳ್ಳಿಯ ಉಣಕಲ್ ವಿಶೇಷ ಮಕ್ಕಳ ಬಾಲಮಂದಿರದ ಮಕ್ಕಳಿಂದ ಪ್ರತಿಭಾ ಪ್ರದರ್ಶನ ಜರುಗಿದವು.

> ಸರಿ ಇದ್ದ ಮಕ್ಕಳಿಗೆ ಸೇವೆ ಸಲ್ಲಿಸುವುದು ಮುಖ್ಯವಾಗುವುದಿಲ್ಲ, ಪ್ರೀತಿಯಿಂದ ವಂಚಿತರಾದ ಮಕ್ಕಳ ಸೇವೆ ಮಾಡುವುದು ಮುಖ್ಯವಾಗುತ್ತದೆ. ಅತೀ ಹೆಚ್ಚು ಕಣ್ಣೀರು ಸುರಿಸುವವರು ಮಹಿಳೆಯರು. ಅದಕ್ಕೆ ಕಾರಣರು ಪುರುಷರು. ಸಾವಿತ್ರಿಬಾಯಿ ಫುಲೆ ಅಳುವ ಹೆಣ್ಣುಮಕ್ಕಳ ಕಣ್ಣೀರು ಒರೆಸಲಿಕ್ಕೆ ವಸ್ತ್ರ ಕೊಡದೇ ಅಕ್ಷರದ ಅರಿವು ನೀಡಿದಳು. ಹೆಣ್ಣುಮಕ್ಕಳು ತಲೆ ಎತ್ತಿ ನಡೆಯುವಂತೆ ಮಾಡಿದ ಮಹಾ ತಾಯಿಯನ್ನು ಸ್ಮರಿಸಿಕೊಳ್ಳುವುದೆಂದರೆ ಹೃದಯದಲ್ಲಿ ಬೆಳಕು ತಂದುಕೊಳ್ಳುವುದಾಗಿದೆ. ಅವಳ ಹೆಸರಿನಲ್ಲಿ ಪ್ರಶಸ್ತಿ ನೀಡುವುದು ಬಹು ದೊಡ್ಡ ಪ್ರೇರಣೆಯದ್ದಾಗಿದೆ. ಇಂಥ ಕಾರ್ಯ ಮಾಡುತ್ತಿರುವ ಸಂಸ್ಥೆಯ ನಡೆ ಅಭಿನಂದನೀಯ ಎಂದರು.
>
> –ಶಶಿಧರ ತೋಡಕರ್, ಪ್ರಾಚಾರ್ಯರು,
> ಹಿರೇಮಲ್ಲೂರ ಈಶ್ವರನ್ ಕಾಲೇಜ್.

## ಶುಶ್ರೂಷ ನಿಖಾಯದ ಪರೀಕ್ಷೆ ಸಿಟ್ಟಿಂಗ್ ಸ್ಕ್ವಾಡ್ ನೇಮಕ

■ ವಿಜಯಸಾಕ್ಷಿ ಸುದ್ದಿ, ಗದಗ

ಶುಶ್ರೂಷ ನಿಖಾಯದ ಪರೀಕ್ಷೆಗಳು ಜನವರಿ 2 ರಿಂದ 26 ರವರೆಗೆ ಬೆಳಿಗ್ಗೆ 9.30 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ಜಿಲ್ಲೆಯ ಗದಗ ಇನ್‌ಸ್ಟಿಟ್ಯೂಟ್ ಆಫ್ ಮೆಡಿಕಲ್ ಸೈನ್ಸ್ ಮಲ್ಲಸಮುದ್ರ (ಜಿಮ್ಸ್) ಇಲ್ಲಿ ನಡೆಯಲಿವೆ.

ಸದರಿ ಪರೀಕ್ಷೆಯಲ್ಲಿ ಅಕ್ರಮ ನಕಲು ತಡೆಗಟ್ಟಲು ಸಿಟ್ಟಿಂಗ್ ಸ್ಕ್ವಾಡ್ ನೇಮಕ ಮಾಡಲಾಗಿದೆ. ಈ ಸಿಟ್ಟಿಂಗ್ ಸ್ಕ್ವಾಡ್ ಪ್ರತಿದಿನ ಪರೀಕ್ಷೆ ಪ್ರಾರಂಭವಾಗುವ ಮುನ್ನ ಅಥವಾ ಮುಗಿಯುವವರೆಗೆ ಪರೀಕ್ಷಾ ಕೇಂದ್ರಗಳಲ್ಲಿ ವ್ಯಾಪಕವಾಗಿ ಪರಿವೀಕ್ಷಣೆ ಮಾಡುವ ಮೂಲಕ ಪರೀಕ್ಷೆಯ ಪಾವಿತ್ರತೆಯನ್ನು ಕಾಪಾಡಿಕೊಂಡು ಶಿಸ್ತು ಬದ್ಧವಾಗಿ ನಡೆಯುವ ಬಗ್ಗೆ ಖಾತ್ರಿ ಪಡಿಸಿಕೊಂಡು ಪ್ರತಿ ದಿನದ ವರದಿಯನ್ನು ಸಲ್ಲಿಸಬೇಕು ಎಂದು ಜಿಲ್ಲಾ ದಂಡಾಧಿಕಾರಿಗಳೂ ಆಗಿರುವ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಅಖಿಲ ಕರ್ನಾಟಕ ಲಿಂಗಾಯತ ಕುಡುಒಕ್ಕಲಿಗರ ಸಂಘ ಆಯೋಜಿಸುತ್ತಿರುವ ಲಿಂಗರಾಜ ಜಯಂತ್ಯುತ್ಸವ ಕಾರ್ಯಕ್ರಮದಲ್ಲಿ ಕುಡುಒಕ್ಕಲಿಗ ವಿದ್ಯಾರ್ಥಿಗಳಿಗೆ 2023 ಮಾರ್ಚ್ ತಿಂಗಳ 10ನೇ ಮತ್ತು 12ನೇ ತರಗತಿಯ ಪರೀಕ್ಷೆಗಳಲ್ಲಿ ಶೇ. 85ಕ್ಕಿಂತ ಹೆಚ್ಚಿನ ಅಂಕಗಳನ್ನು ಪಡೆದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿಯನ್ನು ಸಲ್ಲಿಸಲು ಜ.20 ಕೊನೆಯ ದಿನವಾಗಿದೆ. ಮಾಲತೇಶ ನಡುವಿನಮನಿ-918496817174, ಪ್ರಶಾಂತ ಕನಾಜ-9741871213 ಮೊಬೈಲ್ ನಂಬರ್‌ಗಳಿಗೆ ಅಂಕಪಟ್ಟಿಯನ್ನು ಕಳಿಸಬೇಕೆಂದು ಅಖಿಲ ಕರ್ನಾಟಕ ಲಿಂಗಾಯತ ಕುಡುಒಕ್ಕಲಿಗರ ಸಂಘದ ಕಾರ್ಯದರ್ಶಿ ಶರಣಪ್ಪ ದಿಡ್ಡಿಮನಿ ವಿನಂತಿಸಿದ್ದಾರೆ.

### ತೆಲಂಗಾಣದ ಕೊಲನುಪಾಕ ಸ್ವಯಂಭು ಶ್ರೀ ಸೋಮೇಶ್ವರ ದೇವಸ್ಥಾನದಲ್ಲಿ ಸಮಾರಂಭ

# ರಂಭಾಪುರಿ ಶ್ರೀಗಳ ಜನ್ಮ ದಿನೋತ್ಸವ

■ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು

ಬಾಳೆಹೊನ್ನೂರು ಶ್ರೀ ರಂಭಾಪುರಿ ಜಗದ್ಗುರು ಪ್ರಸನ್ನ ರೇಣುಕ ಡಾ. ವೀರಸೋಮೇಶ್ವರ ಶಿವಾಚಾರ್ಯ ಭಗವತ್ಪಾದರ 68ನೇ ಜನ್ಮ ದಿನೋತ್ಸವವು ಜ.7ರ ಬೆಳಿಗ್ಗೆ 11 ಗಂಟೆಗೆ ತೆಲಂಗಾಣ ರಾಜ್ಯದ ಕೊಲನುಪಾಕ (ಕೊಲ್ಲಿಪಾಕಿ) ಸ್ವಯಂಭು ಶ್ರೀ ಸೋಮೇಶ್ವರ ದೇವಸ್ಥಾನದ ಪರಿಸರದಲ್ಲಿ ಜರುಗಲಿದೆ.

ಶ್ರೀ ರಂಭಾಪುರಿ ಜಗದ್ಗುರುಗಳ ಸಾನ್ನಿಧ್ಯದಲ್ಲಿ ಜರುಗುವ ಸಮಾರಂಭವನ್ನು ತೆಲಂಗಾಣ ರಾಜ್ಯದ ಮುಖ್ಯಮಂತ್ರಿ ಎ.ರೇವಂತ್ ರೆಡ್ಡಿ ಉದ್ಘಾಟಿಸುವರು. ಅಲೇರು ಕ್ಷೇತ್ರದ ಶಾಸಕ ಬೀರ್ಲಾ ಐಲಯ್ಯ ಇವರ ಅಧ್ಯಕ್ಷತೆಯಲ್ಲಿ ನಡೆಯುವ ಸಮಾರಂಭದಲ್ಲಿ ಕರ್ನಾಟಕ ಸರ್ಕಾರದ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಖಾತೆ ಸಚಿವ ಈಶ್ವರ ಖಂಡ್ರೆ 'ರಂಭಾಪುರಿ ಬೆಳಗು' ಮಾಸಿಕ ಬಿಡುಗಡೆ ಮಾಡುವರು. ಮುಖ್ಯ ಅತಿಥಿಗಳಾಗಿ ಕರ್ನಾಟಕ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಖಾತೆ ಸಚಿವ ಡಾ. ಶರಣ ಪ್ರಕಾಶ



ಪಾಟೀಲ, ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಎನ್.ಎಸ್. ಬೋಸರಾಜು, ನಿವೃತ್ತ ಐಪಿಎಸ್ ಅಧಿಕಾರಿ ಜ್ಯೋತಿಪ್ರಕಾಶ ಮಿರ್ಜಿ ಹಾಗೂ ಕೊಲನಪಾಕ ಗ್ರಾ.ಪಂ ಅಧ್ಯಕ್ಷರು ಮತ್ತು ಸದಸ್ಯರು ಭಾಗವಹಿಸುವರು.

ಐದು ದಿನಗಳ ದಾಸೋಹ ಹಾಗೂ ಸೇವಾರ್ಥಿಗಳಿಗೆ ಗುರುರಕ್ಷೆ ನೀಡುವ ಸೇವೆಯನ್ನು ಕಲಬುರಗಿಯ ಸಮಾಜ ಸೇವಕ ಗಿರಿಯಪ್ಪ ಮುತ್ಯಾ ನಿರ್ವಹಿಸುವರು. ಜ. 3ರಿಂದ 6ರವರೆಗಿನ ಪೂಜಾ ಸೇವಾಕರ್ತರಾಗಿ ಬೆಂಗಳೂರಿನ ಚಂದ್ರಶೇಖರ ನಾಗರಾಳಮಠ, ಚಿಟಗುಪ್ಪದ ಮಲ್ಲಿಕಾರ್ಜುನ ಉಣ್ಣೆ, ಭಾಲ್ಕಿಯ ಚನ್ನಬಸವಣ್ಣ ಬಳಕೆ, ಬೆಂಗಳೂರಿನ ಬೀರೂರು ಶಿವಸ್ವಾಮಿ, ಹೈದರಾಬಾದಿನ ಎಮ್.ವೀರಮಲ್ಲೇಶ, ರಾಮ್ ರೆಡ್ಡಿ, ವಿಜಯಕುಮಾರ ಹೆರೂರು ಹಾಗೂ 7ರಂದು ಶಿವಾಚಾರ್ಯರ ಸಮೂಹ ಪಾಲ್ಗೊಳ್ಳುವರು.

ಜ. 5ರಂದು ವಿಜಯನಗರ ಜಿಲ್ಲೆ ಹರಪನಹಳ್ಳಿ ಸದ್ಭಕ್ತರಿಂದ ಶ್ರೀ ವೀರಭದ್ರಸ್ವಾಮಿ ಗುಗ್ಗುಳ ಮಹೋತ್ಸವ ಜರುಗುವುದು. ಜ. 3ರಿಂದ 7ರವರೆಗೆ ಶ್ರೀ ರಂಭಾಪುರಿ ಜಗದ್ಗುರುಗಳು ಇಷ್ಟಲಿಂಗ ಮಹಾಪೂಜಾ ನೆರವೇರಿಸುವರು.

ಈ ಎಲ್ಲ ಕಾರ್ಯಕ್ರಮಗಳ ಮೇಲ್ವಿಚಾರಣೆಯನ್ನು ಮೇಹಕರ ಹಿರೇಮಠದ ರಾಜೇಶ್ವರ ಶಿವಾಚಾರ್ಯ ಸ್ವಾಮಿಗಳು, ಸಿದ್ಧರಬೆಟ್ಟ ಕ್ಷೇತ್ರದ ವೀರಭದ್ರ ಶಿವಾಚಾರ್ಯ ಸ್ವಾಮಿಗಳು, ಲಿಂಗಸುಗೂರು ಶ್ರೀ ಮಾಣಿಕ್ಯೇಶ್ವರಿ ಆಶ್ರಮದ ಮಾತಾ ನಂದಿಕೇಶ್ವರಿ ಅಮ್ಮನವರು ಹಾಗೂ ಶ್ರೀ ಜಗದ್ಗುರು ರಂಭಾಪುರಿ ಪೀಠದ ಆಡಳಿತಾಧಿಕಾರಿ ಎಸ್.ಬಿ. ಹಿರೇಮಠ ನಿರ್ವಹಿಸುವರು ಎಂದು ಪ್ರಕಟಣೆ ತಿಳಿಸಿದೆ.

# ವಿಜಯೋತ್ಸವ ಕಾರ್ಯಕ್ರಮದಲ್ಲಿ ರಮೇಶ್ ಜಾರಕಿಹೊಳಿ ಭಾಗಿ



■ವಿಜಯಸಾಕ್ಷಿ ಸುದ್ದಿ, ಗೋಕಾಕ

ಆದಿಜಾಂಬವ ನಗರದ ಯುವಕರ ಬಳಗದ ವತಿಯಿಂದ ಹಮ್ಮಿಕೊಳ್ಳಲಾಗಿದ್ದ 206ನೇ ಭೀಮಾ ಕೋರೆಗಾಂವ ವಿಜಯೋತ್ಸವ ಕಾರ್ಯಕ್ರಮದಲ್ಲಿ ಶಾಸಕ ರಮೇಶ್ ಜಾರಕಿಹೊಳಿ ಪಾಲ್ಗೊಂಡರು.

ಈ ಸಂದರ್ಭದಲ್ಲಿ ವಿಶ್ವ ಹಿಂದೂ ಪರಿಷತ್ ಅಧ್ಯಕ್ಷ ಆನಂದ ಪಾಟೀಲ, ಉಪಾಧ್ಯಕ್ಷ ಸಂಜು ಚಿಪ್ಪಲಕಟ್ಟಿ, ಸುರೇಶ್ ಜೋರಾಪುರ, ನಗರ ಸಭೆ ಸದಸ್ಯ ಬಸವರಾಜ್ ಆರೆನ್ನವರ, ಅಶೋಕ್ ಮೇಸ್ತ್ರಿ, ರಾಜು ಮುಲ್ಲಾ, ಡಾ. ಅಜಯ ಭಜಂತ್ರಿ, ಮಹೇಶ ಬಾಗಣ್ಣವರ, ಗೋಪಾಲ್ ಕರಿಯಮ್ಮನವರ್, ಮನೋಜ್ ಕಳ್ಳಿಮನಿ, ಯೋಗೇಶ್ ಮಾವರ್ಕರ್, ಸಾಗರ್ ಗಾಣಿಗೇರ್, ವೆಂಕಟೇಶ್ ಕರಿಯಮ್ಮನವರ್, ಪ್ರವೀಣ್ ಕಳ್ಳಿಮನಿ, ಬಾಳೇಶ್ ಕಾಗಿ, ಮಾರುತಿ ತಳವಾರ್, ಅಮಿತ್ ಗೂಡೋಜ್, ಲಕ್ಷ್ಮೀಕಾಂತ್ ಇರ್ಗಣ್ಣವರ್, ರಾಘವೇಂದ್ರ ಕಳ್ಳಿಮನಿ, ಆನಂದ್ ಭಾಗಣ್ಣವರ್, ಸುನೀಲ್ ಹಿರಗನ್ನವರ್, ರಾಮ್ ಭಜಂತ್ರಿ, ವಿಶಾಲ್ ಭಾಗನ್ನವರ್, ರಾಜು ಉಚ್ಚನ್ನವರ್, ಅಭಿಷ ಕನಮಟ್ಟಿ, ರಾಯಪ್ಪ ಅರಣವರ ಮುಂತಾದವರು ಉಪಸ್ಥಿತರಿದ್ದರು.

# ಉದ್ಯೋಗ ಹೊಂದಲು ಕೌಶಲ್ಯ ಅತ್ಯಗತ್ಯ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮಹಿಳೆಯರು ಆರ್ಥಿಕವಾಗಿ ಸಬಲರಾಗಬೇಕಲ್ಲದೆ, ಆರ್ಥಿಕ ಸ್ವಾವಲಂಬನೆ ಹೊಂದಬೇಕು. ಅದಕ್ಕಾಗಿ ಉದ್ಯೋಗಾಧಾರಿತ ತರಬೇತಿ ಅವಶ್ಯವಾಗಿದೆ ಎಂದು ಹಿಂದೂ ಸೇವಾ ಪ್ರತಿಷ್ಠಾನದ ನಿರ್ದೇಶಕ ಸುರೇಶ ಜಿ ಹೇಳಿದರು.

ಅವರು ಸೋಮವಾರ ಪಟ್ಟಣದ ಹಿರೇಬಣದಲ್ಲಿ ಹಿಂದೂ ಸೇವಾ ಪ್ರತಿಷ್ಠಾನದಿಂದ ಮಹಿಳೆಯರಿಗಾಗಿ ಹಮ್ಮಿಕೊಂಡಿದ್ದ ಉಚಿತ ಹೊಲಿಗೆ ತರಬೇತಿ ಕೇಂದ್ರ ಉದ್ಘಾಟನೆ ನೆರವೇರಿಸಿ ಮಾತನಾಡಿದರು.

ಪ್ರಸ್ತುತ ದುಬಾರಿ ದಿನಮಾನದಲ್ಲಿ ಕುಟುಂಬದ ಆದಾಯದ ಮೂಲ ವೃದ್ಧಿಸಿಕೊಳ್ಳುವುದು ಅಗತ್ಯವಾಗಿದೆ. ಉದ್ಯೋಗಂ ಪುರುಷ ಲಕ್ಷಣಂ ಆಗಿನ ಕಾಲದ ಹೇಳಿಕೆ. ಆದರೆ ಈಗ ಕುಟುಂಬದ ಎಲ್ಲರೂ ದುಡಿಯಲೇಬೇಕು. ಅಂದಾಗ ಮಾತ್ರ ಆರ್ಥಿಕ ಸಂಕಷ್ಟದಿಂದ ಪಾರಾಗಿ ನೆಮ್ಮದಿಯ ಬದುಕು ಕಟ್ಟಿಕೊಳ್ಳಲು ಸಾಧ್ಯವಾಗುತ್ತದೆ. ಉದ್ಯೋಗ ಹೊಂದಲು ಎಲ್ಲರಿಗೂ ವಿದ್ಯಾಭ್ಯಾಸದೊಂದಿಗೆ ವಿಶೇಷವಾದ ಕೌಶಲ್ಯ, ತರಬೇತಿ ಬೇಕಾಗುತ್ತದೆ. ತಾಯಂದಿರು ಮಕ್ಕಳಿಗೆ ಬಾಲ್ಯದಲ್ಲಿಯೇ ಉತ್ತಮ ಶಿಕ್ಷಣ, ಸಂಸ್ಕಾರ ಕಲಿಸಿ ಸಮಾಜದ ಉತ್ತಮ ಪ್ರಜೆಯನ್ನಾಗಿಸಬೇಕು ಎಂದರು.

ಡಾ. ಪ್ರಕಾಶ ಹೊಸಮನಿ ಮಾತನಾಡಿ, ಮಹಿಳೆಯರ ಸ್ವಾವಲಂಬಿ ಬದುಕಿಗಾಗಿ ಸರ್ಕಾರ ಹತ್ತಾರು ಯೋಜನೆ, ಉದ್ಯೋಗಾವಕಾಶ, ತರಬೇತಿ, ಆರ್ಥಿಕ ಸೌಲಭ್ಯ ಕಲ್ಪಿಸುತ್ತಿದೆ. ಈ ಬಗ್ಗೆ ಮಾಹಿತಿ ಪಡೆದು ಸರ್ಕಾರದ ಯೋಜನೆಗಳ ಸದುಪಯೋಗ ಪಡೆದುಕೊಂಡು ಆರ್ಥಿಕವಾಗಿ ಸಬಲರಾಗಬೇಕು. ಆ ಮೂಲಕ ಬದುಕನ್ನು ಸದೃಡಗೊಳಿಸಿಕೊಳ್ಳಬೇಕು ಎಂದರು.


ಈ ವೇಳೆ ಹಿಂದೂ ಸೇವಾ ಪ್ರತಿಷ್ಠಾನದ ಸಂಚಾಲಕ ನಟರಾಜ ರಾನಡೆ, ಶಿವಲಿಂಗಪ್ಪ ಅಡರಕಟ್ಟಿ, ಶಂಕರ ಬ್ಯಾಡಗಿ, ಪ್ರಿಯಾಂಕ ಬಿ ಸೇರಿ 50ಕ್ಕೂ ಹೆಚ್ಚು ತರಬೇತಿ ಆಕಾಂಕ್ಷಿ ಮಹಿಳೆಯರಿದ್ದರು.

# ಬಿವಿವಿ ಶಾಲೆಯ ವಾರ್ಷಿಕ ಸ್ನೇಹ ಸಮ್ಮೇಳನ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಬಾಲ ವಿನಾಯಕ ವಿದ್ಯಾನಿಕೇತನ ಶಾಲೆಯ 38ನೇ ವಾರ್ಷಿಕ ಸ್ನೇಹ ಸಮ್ಮೇಳನವು ಜ.5ರಂದು ಜರುಗಲಿದೆ.

ಪೂರ್ವ ಪ್ರಾಥಮಿಕ ಮತ್ತು ಕಿರಿಯ ಪ್ರಾಥಮಿಕ ವಿದ್ಯಾರ್ಥಿಗಳ ಕಾರ್ಯಕ್ರಮ ಮುಂಜಾನೆ 9 ಗಂಟೆಗೆ ಹಾಗೂ ಪ್ರಾಥಮಿಕ ಮತ್ತು ಪ್ರೌಢಶಾಲಾ ವಿದ್ಯಾರ್ಥಿಗಳ ವಾರ್ಷಿಕೋತ್ಸವು ಸಂಭಾಪೂರ ರಸ್ತೆಯಲ್ಲಿರುವ



ಶಾಲಾ ಆವರಣದಲ್ಲಿ ನಡೆಯಲಿದೆ.

ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಪದ್ಮಶ್ರೀ ಪುರಸ್ಕೃತರು ಹಾಗೂ ಕರ್ನಾಟಕ ಜಾನಪದ ಅಕಾಡೆಮಿಯ ಪ್ರಥಮ ಮಂಗಳಮುಖಿ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ ಡಾ. ಮಾತಾ ಮಂಜಮ್ಮ ಜೋಗತಿ ಆಗಮಿಸಲಿದ್ದಾರೆ. ಶಾಲೆಯ ಆಡಳಿತ ಮಂಡಳಿಯ ಸದಸ್ಯರು, ಪ್ರಾಚಾರ್ಯರು ಮತ್ತು ಸಮಸ್ತ ಸಿಬ್ಬಂದಿ ವರ್ಗದವರು ಸ್ವಾಗತ ಕೋರಿದ್ದಾರೆ.

### ಸರ್ಕಾರಿ ಯೋಜನೆಗಳ ಪ್ರಯೋಜನ ಪಡೆಯಲು ಕಡ್ಡಾಯವಾಗಿ ರೈತರು ಎಫ್‌ಐಡಿ ಹೊಂದಿರಬೇಕು

# ಎಫ್‌ಐಡಿ ಸೃಜನೆಗೆ ಕೃಷಿ ಇಲಾಖೆ ಮನವಿ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಜಿಲ್ಲೆಯ 8 ತಾಲೂಕುಗಳನ್ನು ರಾಜ್ಯ ಸರ್ಕಾರ ಬರ ಪೀಡಿತ ತಾಲೂಕುಗಳೆಂದು ಘೋಷಣೆ ಮಾಡಿದ್ದು, ಬರ ಘೋಷಿತ ತಾಲೂಕುಗಳಲ್ಲಿ ಬೆಳೆ ನಷ್ಟವಾಗಿರುವ ರೈತರು ಪರಿಹಾರ ಧನ ಪಡೆಯಲು ಕಡ್ಡಾಯವಾಗಿ ಎಫ್‌ಐಡಿ ಹೊಂದಿರಬೇಕು ಹಾಗೂ ಎಫ್‌ಐಡಿಯಲ್ಲಿ ರೈತರು ತಮ್ಮ ಹಕ್ಕಿನಲ್ಲಿರುವ ಎಲ್ಲಾ ಸಾಗುವಳಿ ಭೂಮಿಗಳ ವಿವರಗಳನ್ನು ಸೇರಿಸಿರಬೇಕು ಎಂದು ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಡಾ.ಕಿರಣಕುಮಾರ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಬೆಳೆನಷ್ಟವಾಗಿರುವ ರೈತರು ಪರಿಹಾರಧನ ಪಡೆಯಲು



ಕಡ್ಡಾಯವಾಗಿ ಎಫ್‌ಐಡಿಯೊಂದಿಗೆ ತಾವು ಹೊಂದಿರುವ ಎಲ್ಲ ಸಾಗುವಳಿ ಜಮೀನುಗಳನ್ನು ನೋಂದಣಿ ಮಾಡಿಕೊಂಡಿರಬೇಕು. ಎಫ್‌ಐಡಿಯಲ್ಲಿ ದಾಖಲಿಸಿದ ಜಮೀನಿನ ವಿಸ್ತೀರ್ಣಗಳಿಗೆ ಮಾತ್ರ ಸರ್ಕಾರದ ಪರಿಹಾರ ಧನ ಸೌಲಭ್ಯ ದೊರೆಯುವುದರಿಂದ ರೈತರು ತಮ್ಮ ಎಲ್ಲಾ ಜಮೀನಿನ ಸರ್ವೆ ನಂಬರ್, ವಿಸ್ತೀರ್ಣಗಳನ್ನು ಕೂಡಲೇ ಫ್ರೂಟ್ಸ್ ತಂತ್ರಾಂಶದಲ್ಲಿ ದಾಖಲಿಸಿಕೊಳ್ಳಬೇಕೆಂದು ಅವರು ತಿಳಿಸಿದ್ದಾರೆ.

ಧಾರವಾಡ ತಾಲೂಕಿನ 13927, ನವಲಗುಂದ ತಾಲೂಕಿನ 5945, ಹುಬ್ಬಳ್ಳಿ ತಾಲೂಕಿನ 8493, ಕಲಘಟಗಿ ತಾಲೂಕಿನ 12036, ಕುಂದಗೋಳ ತಾಲೂಕಿನ 8848, ಹುಬ್ಬಳ್ಳಿನಗರ ತಾಲೂಕಿನ 6355, ಅಳ್ನಾವರ ತಾಲೂಕಿನ 987 ಮತ್ತು ಅಣ್ಣಿಗೇರಿ ತಾಲೂಕಿನ 3476 ಪ್ಲಾಟ್‌ಗಳು ಎಫ್‌ಐಡಿಯಲ್ಲಿ ಸೇರ್ಪಡೆಯಾಗಿಲ್ಲ. ಕಾರಣ, ಇನ್ನೂ ಎಫ್‌ಐಡಿ ಮಾಡಿಸದ ರೈತರು ಈ ಕೂಡಲೇ ಫ್ರೂಟ್ಸ್ ಐಡಿ ಮಾಡಿಸಿಕೊಳ್ಳಬೇಕು ಹಾಗೂ ಫ್ರೂಟ್ಸ್ ಐಡಿ ಹೊಂದಿದವರು ತಮ್ಮ ಎಲ್ಲ ಸರ್ವೆ ನಂಬರ್‌ಗಳನ್ನು ಎಫ್‌ಐಡಿ ಜೊತೆ ಸೇರಿಸಿಕೊಳ್ಳಬೇಕು.

ಜಿಲ್ಲೆಯಲ್ಲಿನ ಒಟ್ಟು 3 ಲಕ್ಷ ಪ್ಲಾಟ್‌ಗಳ ಪೈಕಿ ಈಗಾಗಲೇ 2.4 ಲಕ್ಷ ಪ್ಲಾಟ್‌ಗಳು ಅಂದರೆ ಶೇ.80ರಷ್ಟು ಪ್ಲಾಟ್‌ಗಳನ್ನು ಫ್ರೂಟ್ಸ್ ತಂತ್ರಾಂಶದಲ್ಲಿ ಸೇರಿಸಲಾಗಿದೆ. ಸುಮಾರು 60 ಸಾವಿರ ಪ್ಲಾಟ್‌ಗಳು ಅಂದರೆ ಶೇ.20ರಷ್ಟು ಬಾಕಿ ಇವೆ.

ರೈತರು ಎಫ್‌ಐಡಿ ಮಾಡಿಸಿಕೊಳ್ಳಲು ಅವರ ಆಧಾರ್ ಕಾರ್ಡ್, ಬ್ಯಾಂಕ್ ಖಾತೆ ಪುಸ್ತಕದ ಪ್ರತಿ, ತಮ್ಮ ಹೆಸರಿನಲ್ಲಿರುವ ಎಲ್ಲ ಜಮೀನುಗಳ ಪಹಣಿ, ತಮ್ಮ ಮೊಬೈಲ್ ಸಂಖ್ಯೆ ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ರೈತರು ಆಗಿದ್ದಲ್ಲಿ ಅವರ ಜಾತಿ ಪ್ರಮಾಣಪತ್ರದ ಪ್ರತಿಯನ್ನು ಸಲ್ಲಿಸಬೇಕು.

ಬರ ಪರಿಹಾರದ ಹಣ ಮಾತ್ರವಲ್ಲದೇ, ಬೆಳೆವಿಮೆ, ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಕೃಷಿ ಉತ್ಪನ್ನ ಮಾರಾಟ ಮಾಡಲು, ಸರ್ಕಾರದ ಯಾವುದೇ ಯೋಜನೆಯ ಸವಲತ್ತು ಹಾಗೂ ಬ್ಯಾಂಕ್ ಸಾಲಪಡೆಯಲು ಎಫ್‌ಐಡಿ ಕಡ್ಡಾಯವಾಗಿದೆ.

ರೈತರು ಮೇಲೆ ತಿಳಿಸಿದ ದಾಖಲಾತಿಗಳೊಂದಿಗೆ ವಿಳಂಬ ಮಾಡದೇ ಈ ಕೂಡಲೇ ಎಫ್‌ಐಡಿ ಮಾಡಿಸಿಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ಹತ್ತಿರದ ಕಂದಾಯ, ಕೃಷಿ, ತೋಟಗಾರಿಕೆ, ರೇಷ್ಮೆ, ಪಶು ಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ ಅಧಿಕಾರಿಗಳನ್ನು ಸಂಪರ್ಕಿಸಬಹುದು ಎಂದು ಜಂಟಿ ಕೃಷಿ ನಿರ್ದೇಶಕ ಡಾ.ಕಿರಣಕುಮಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಜಿಲ್ಲಾ ಕಸಾಪ ವತಿಯಿಂದ ಕುವೆಂಪು ಜನ್ಮದಿನ, ವಿಶ್ವ ಮಾನವ ದಿನಾಚರಣೆ

# ವಿಶ್ವಮಾನವತ್ವಕ್ಕೆ ಶಿಕ್ಷಣವೇ ಮಾರ್ಗವಾಗಲಿ

■ವಿಜಯಸಾಕ್ಷಿ ಸುದ್ದಿ, 000

ವಿಜಯಸಾಕ್ಷಿ ಸುದ್ದಿ, ಗದಗ

ಸಾಹಿತ್ಯದ ಎಲ್ಲ ಪ್ರಕಾರಗಳಲ್ಲಿ ಕೃಷಿ ಮಾಡಿ, ಯಶಸ್ಸು ಗಳಿಸಿದವರು ರಾಷ್ಟ್ರಕವಿ ಕುವೆಂಪು. ಅವರು ಹೊಸಗನ್ನಡ ಸಾಹಿತ್ಯವನ್ನು ಸರ್ವಾಂಗ ಸುಂದರಗೊಳಿಸಿ, ವಿಮರ್ಶಾತ್ಮಕ ಚಿಂತನೆ, ವೈಚಾರಿಕ ಪ್ರಜ್ಞೆಯನ್ನು ಓದುಗರಲ್ಲಿ ಬೆಳೆಸಿದ್ದಾರೆ. ಪದಬಂಧ, ಕಾವ್ಯಾಲಂಕಾರ, ಭಾವನೆಗಳ ಪ್ರವಾಹದ ದಟ್ಟತೆಯನ್ನು ಅವರ ಕಾವ್ಯದಲ್ಲಿ ಕಾಣಬಹುದಾಗಿದೆ ಎಂದು ಅನ್ನದಾನೀಶ್ವರ ಮಹಾವಿದ್ಯಾಲಯದ ಉಪನ್ಯಾಸಕ ನಾಗರಾಜ ಹೊನ್ನೂರ ನುಡಿದರು.




ಅವರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಏರ್ಪಡಿಸಿದ್ದ ರಾಷ್ಟ್ರಕವಿ ಕುವೆಂಪು ಜನ್ಮದಿನೋತ್ಸವ ಹಾಗೂ ವಿಶ್ವಮಾನವ ದಿನಾಚರಣೆಯಲ್ಲಿ 'ಕುವೆಂಪು ಸಾಹಿತ್ಯ ಮತ್ತು ವಿಶ್ವಮಾನವ ಪ್ರಜ್ಞೆ' ಕುರಿತು ಉಪನ್ಯಾಸ ನೀಡಿ ಮಾತನಾಡಿದರು.

ಪ್ ್ರ ತಿ ಂ ು ಿ ಊ ಬ್ಬ ರ ್ ಊ ವಿಶ್ವಮಾನವನಾಗಿ ಬೆಳೆಯಬೇಕು. ಅದಕ್ಕೆ ಶಿಕ್ಷಣ ಮಾರ್ಗವಾಗಬೇಕೆಂದು ನಂಬಿದ್ದರು. ಸಿದ್ಧ ಮಾದರಿಗಳನ್ನು ಧಿಕ್ಕರಿಸಿ, ಹೊಸ ವಿಚಾರಗಳನ್ನು ತಮ್ಮ ಕೃತಿಗಳಲ್ಲಿ ಮುನ್ನೆಲೆಗೆ ತಂದು ಓದುಗನ ಚಿಂತನೆಯ ಕ್ಷಿತಿಜವನ್ನು ವಿಸ್ತರಿಸಿದರು. ಆಧ್ಯಾತ್ಮದ ಹೆಸರಿನಲ್ಲಿ ನಡೆಯುವ ಶೋಷಣೆ ಖಂಡಿಸಿ ನಿಜ ಆಧ್ಯಾತ್ಮದೆಡೆಗೆ ಸಾಗುವಂತೆ ಪ್ರೇರೆಪಿಸಿದರು. ಸಾಹಿತ್ಯ ವಿಮರ್ಶೆ, ಕಾವ್ಯ ಮೀಮಾಂಸೆ, ನಾಟಕ, ಕತೆ ಮತ್ತು ಕಾದಂಬರಿ ಕ್ಷೇತ್ರವನ್ನು ತಮ್ಮ ಸೃಜನಶೀಲತೆಯಿಂದ ಶ್ರೀಮಂತಗೊಳಿಸಿದ್ದಾರೆಂದು ಅಭಿಪ್ರಾಯಪಟ್ಟರು.

ಅಧ್ಯಕ್ಷತೆ ವಹಿಸಿದ್ದ ವಿವೇಕಾನಂದಗೌಡ ಪಾಟೀಲ ಮಾತನಾಡಿ, ಕುವೆಂಪು ನಿಸರ್ಗದ ಮಡಿಲಿನಲ್ಲಿ ರೋಮ್ಯಾಂಟಿಕ್ ಕವಿಯಾಗದೇ ಸಮಾಜವನ್ನು ತೆರೆದ ಕಣ್ಣಿನಿಂದ ನೋಡಿ ಜನಮನದ ಕವಿಯಾದರು. ಶೋಷಣೆಗೆ ವಿರುದ್ಧವಾಗಿ ತಮ್ಮ ಲೇಖನಿಯನ್ನು ಬಳಸಿದರು. ಶುದ್ಧವಾದ ಆಧ್ಯಾತ್ಮದ ಬದುಕನ್ನು ಬದುಕಿ ಸತ್ಯವನ್ನು ಪ್ರತಿಪಾದಿಸಿ, ವಿಶ್ವಮಾನವ ಪ್ರಜ್ಞೆಯನ್ನು ತಂದರು. ಸಣ್ಣ ಸಣ್ಣ ಪಾತ್ರಗಳಲ್ಲಿರುವ ಉದಾತ್ತ ಗುಣಗಳನ್ನು ತೋರ್ಪಡಿಸಿ ಜೀವ ತುಂಬುವ ಕಾರ್ಯವನ್ನು ಅವರ ಕೃತಿಗಳಲ್ಲಿ ಮಾಡಿದ್ದನ್ನು ಕಾಣಬಹುದಾಗಿದೆ ಎಂದು ತಿಳಿಸಿದರು.

ಎಸ್.ವಿ. ಕುಂದಗೋಳ, ಕಾರ್ಯದರ್ಶಿ ಶಿವಾನಂದ ಗಿಡ್ನಂದಿ, ಡಾ. ದತ್ತಪ್ರಸನ್ನ ಪಾಟೀಲ ವೇದಿಕೆ ಮೇಲಿದ್ದರು. ಸಂಗೀತ ಕಲಾವಿದ ಶ್ರೀನಿವಾಸ ಕುಲಕರ್ಣಿ ಕುವೆಂಪು ಗೀತೆಗಳನ್ನು ಹಾಡಿದರು. ಪ್ರೊ. ಕಿಶೋರಬಾಬು ನಾಗರಕಟ್ಟಿ ಸ್ವಾಗತಿಸಿದರು. ಪವಿತ್ರಾ ಹೂಗಾರ ಕಾರ್ಯಕ್ರಮ ನಿರೂಪಿಸಿದರು. ಪಾರ್ವತಿ ಬೇವಿನಮರದ ವಂದಿಸಿದರು.

ಕಾರ್ಯಕ್ರಮದಲ್ಲಿ ಶೇಖಣ್ಣ ಕಳಸಾಪುರಶೆಟ್ರ, ಪ್ರೊ. ಕೆ.ಎಚ್. ಬೇಲೂರ, ಪ್ರೊ. ಅನ್ನದಾನಿ ಹಿರೇಮಠ, ಡಾ.ರಶ್ಮಿ ಅಂಗಡಿ, ಪ್ರೊ. ಶಕುಂತಲಾ ಸಿಂಧೂರ, ರೇಣುಕಾ ಬಡಿಗೇರ, ಅಕ್ಕಮ್ಮ ಪಾರ್ವತಿಮಠ, ಡಿ.ಜಿ. ಕುಲಕರ್ಣಿ, ಎಚ್.ಟಿ. ಸಂಜೀವಸ್ವಾಮಿ, ಶಶಿಕಾಂತ ಕೊರ್ಲಹಳ್ಳಿ, ಸತೀಶಕುಮಾರ ಚನ್ನಪ್ಪಗೌಡರ, ಸಿದ್ಧಲಿಂಗೇಶ ಸಜ್ಜನಶೆಟ್ಟರ, ಜೆ.ಎ. ಪಾಟೀಲ, ಕೆ.ಜಿ. ವ್ಯಾಪಾರಿ, ಅಂದಯ್ಯ ಅರವಟಗಿಮಠ, ರತ್ನಾ ಘಾರ್ಗಿ, ವಿ.ಎಸ್. ದಲಾಲಿ, ರಾಜಶೇಖರ ಕರಡಿ, ಸಿ.ಎಂ. ಮಾರನಬಸರಿ, ಅಮರೇಶ ರಾಂಪುರ, ಬಸವರಾಜ ಕರಮುಡಿ, ಮ.ಫ. ಡೋಣಿ, ರವಿ ದೇವರಡ್ಡಿ, ಷಡಕ್ಷರಿ ಮೆಣಸಿನಕಾಯಿ, ಡಿ.ಎಸ್. ಬಾಪುರಿ, ಎಂ.ಎಚ್. ಸವದತ್ತಿ, ರತ್ನಕ್ಕ ಪಾಟೀಲ, ಬಿ.ಎಸ್. ಹಿಂಡಿ, ಎಂ.ವಿ. ಕೆಂಬಾವಿಮಠ, ಮಂಜುಳಾ ವೆಂಕಟೇಶಯ್ಯ, ಶಾರದಾ ಬಾಣದ, ಅಶೋಕ ಸತರೆಡ್ಡಿ, ಗಂಗಾಧರ ಕೆಂಗಾರ, ಎಂ.ಎನ್. ಸಜ್ಜನರ, ಪ್ರ.ತೋ. ನಾರಾಯಣಪುರ, ಕೆ.ಎಸ್. ಗುಗ್ಗರಿ, ಜಗನ್ನಾಥ ಟೀಕಾಂದರ, ಶಂಕರಗೌಡ ಪಾಟೀಲ ಮೊದಲಾದವರು ಉಪಸ್ಥಿತರಿದ್ದರು.

### ಸಹಕಾರ ಸಂಘ, ಸ್ವ-ಸಹಾಯ ಸಂಘಗಳ ಸದಸ್ಯರಿಗೆ ಸಹಕಾರ ತರಬೇತಿ ಶಿಬಿರ

# ಕೆ.ಸಿ.ಸಿ. ಬ್ಯಾಂಕ್ ರೈತರ ಬಾಳಿನ ಬೆಳಕು

■ವಿಜಯಸಾಕ್ಷಿ ಸುದ್ದಿ, ಗದಗ

ಮನುಷ್ಯ ತಾನು ಬೆಳೆಯುವುದರ ಜೊತೆಗೆ ಮತ್ತೊಬ್ಬರನ್ನು ಬೆಳೆಸುವ ಪ್ರಯತ್ನ ಮಾಡಿದರೆ ದೊಡ್ಡವನಾಗುತ್ತಾನೆ. ಅಂತಹ ಉದ್ದೇಶವನ್ನು ಇಟ್ಟುಕೊಂಡಿರುವ ಪವಿತ್ರವಾದ ಕ್ಷೇತ್ರ ಯಾವುದಾದರೂ ಇದ್ದರೆ ಅದು ಸಹಕಾರಿ ಕ್ಷೇತ್ರ. ಕೆ.ಸಿ.ಸಿ. ಬ್ಯಾಂಕ್ ಬಡವರ, ನಿರ್ಗತಿಕರ, ಮಧ್ಯಮ ವರ್ಗದವರ ಮತ್ತು ರೈತರ ಬಾಳಿಗೆ ಬೆಳಕಾಗುವ ಕಾರ್ಯವನ್ನು ಮಾಡುತ್ತಿದೆ ಎಂದು ಸುಕ್ಷೇತ್ರ ಬಳಗಾನೂರ ಮಠದ ಶ್ರೀ ಶಿವಶಾಂತವೀರ ಶರಣರು ನುಡಿದರು.



ಅವರು ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ., ಬೆಂಗಳೂರು, ಗದಗ ಜಿಲ್ಲಾ ಸಹಕಾರ ಯೂನಿಯನ್ ನಿ., ಗದಗ, ಸಹಕಾರ ಇಲಾಖೆ, ಗದಗ ಹಾಗೂ ದಿ ಕೆ.ಸಿ.ಸಿ. ಬ್ಯಾಂಕ್ ಲಿ., ಧಾರವಾಡ ಇವರುಗಳ ಸಂಯುಕ್ತ ಆಶ್ರಯದಲ್ಲಿ ಮುಂಡರಗಿ ತಾಲೂಕಿನ ಎಲ್ಲಾ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ಅಧ್ಯಕ್ಷರು, ಮುಖ್ಯ ಕಾರ್ಯನಿರ್ವಾಹಕರು ಹಾಗೂ ಸ್ವ-ಸಹಾಯ ಸಂಘಗಳ ಸದಸ್ಯರಿಗೆ ಆಯೋಜಿಸಿದ್ದ ಒಂದು ದಿನದ ವಿಶೇಷ ಸಹಕಾರ ತರಬೇತಿ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದರು.

ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳದ ಉಪಾಧ್ಯಕ್ಷ, ಧಾರವಾಡ ಕೆ.ಸಿ.ಸಿ. ಬ್ಯಾಂಕ್‌ನ ಅಧ್ಯಕ್ಷ ಶಿವಕುಮಾರಗೌಡ ಎಸ್.ಪಾಟೀಲ ಅಧ್ಯಕ್ಷತೆ ವಹಿಸಿ ಮಾತನಾಡಿ, ಕೆ.ಸಿ.ಸಿ. ಬ್ಯಾಂಕಿನಲ್ಲಿ ಖಾತೆ ಇಲ್ಲದವರಿಗೆ ಬ್ಯಾಂಕಿನ ವ್ಯಾಪ್ತಿಯಲ್ಲಿ ಬರುವ ಧಾರವಾಡ, ಹಾವೇರಿ ಹಾಗೂ ಗದಗ ಜಿಲ್ಲೆಗಳಲ್ಲಿನ ಪ್ರತಿ ಗ್ರಾಮಗಳ ಮನೆ ಮನೆಗೆ ಬ್ಯಾಂಕಿನ ಸಿಬ್ಬಂದಿಗಳು ತೆರಳಿ ಖಾತೆಗಳನ್ನು ತೆರೆಯುವ ಕಾರ್ಯವನ್ನು ಮಾಡುತ್ತಿದ್ದು, ಪ್ರತಿ ತಿಂಗಳು 10 ಸಾವಿರ ಖಾತೆ ತೆರೆಯಲಾಗುತ್ತಿದೆ. ಸಹಕಾರ ಸಂಘದಲ್ಲಿರುವ ಸ್ ಹ್ ಕಾ ರಿ ಗ್ ಳ್ ಊ ಂ ದಿ ಗ್ ಅಲ್ಲಿನ ಸೌಲಭ್ಯಗಳ ಕುರಿತು ಚರ್ಚಿಸಲಾಗುತ್ತಿದೆ. ಎಲ್ಲಾ ಪ್ಯಾಕ್ಸ್ ಸಂಘಗಳ ಅಧ್ಯಕ್ಷರು ಹಾಗೂ ಕಾರ್ಯದರ್ಶಿಗಳು ಈ ತರಬೇತಿ ಕಾರ್ಯಕ್ರಮದ ಸದುಪಯೋಗ ಪಡೆದುಕೊಂಡು, ತಮ್ಮ ಸಂಘದ ಏಳ್ಗೆಗೆ ಶ್ರಮಿಸಬೇಕು ಎಂದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಸಹಕಾರ ಯೂನಿಯನ್‌ನ ನಿರ್ದೇಶಕ ಯಂಕಪ್ಪ ಎಲ್. ಹುಳಕಣ್ಣವರ, ಶಿದ್ದನಗೌಡ ಬಿ.ಪಾಟೀಲ, ತಿಪ್ಪಣ್ಣ ಎಸ್.ಭಜಮ್ಮನವರ, ಮುಂಡರಗಿ ಪಿಕಾರ್ಡ್ ಬ್ಯಾಂಕಿನ ಅಧ್ಯಕ್ಷ ಹಾಲಪ್ಪ ಆರ್.ಕಬ್ಬೇರಹಳ್ಳಿ, ಉಪಾಧ್ಯಕ್ಷ ಪುಲಕೇಶಿಗೌಡ ಡಿ.ಪಾಟೀಲ, ಮುಂಡರಗಿ ಟಿ.ಎ.ಪಿ.ಸಿ.ಎಂ.ಎಸ್ ಅಧ್ಯಕ್ಷ ಶ್ರೀ ಎಂ.ಎಸ್. ಪಾಟೀಲ, ಉಪಾಧ್ಯಕ್ಷ ಎಚ್.ಎಸ್. ಪಾಣಿಗಟ್ಟಿ, ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಇಲಾಖೆಯ ಸಹಾಯಕ ನಿರ್ದೇಶಕರಾದ ಎಚ್.ಎ. ಬಂಡೆಣ್ಣವರ, ಮುಂಡರಗಿ ಕೆ.ಸಿ.ಸಿ.ಬ್ಯಾಂಕಿನ ನೋಡಲ್ ಅಧಿಕಾರಿ ಮಾಧವರಾವ್ ಕುಲಕರ್ಣಿ, ಮುಂಡರಗಿ ಪ್ಯಾಕ್ಸ್ ಸಂಘಗಳ ಒಕ್ಕೂಟದ ಅಧ್ಯಕ್ಷ ಬಿ.ಎಸ್. ಸಂಶಿ ಉಪಸ್ಥಿತರಿದ್ದರು.

ಮುಂಡರಗಿ ಕೆ.ಸಿ.ಸಿ. ಬ್ಯಾಂಕಿನ ಸಿಬ್ಬಂದಿ ಹೀನಾ ಅಳವುಂಡಿ ಹಾಗೂ ಸಂಗಡಿಗರು ಪ್ರಾರ್ಥಿಸಿದರು. ಗದಗ ಜಿಲ್ಲಾ ಸಹಕಾರ ಯೂನಿಯನ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಚಂದ್ರಶೇಖರ ಎಸ್.ಕರಿಯಪ್ಪನವರ ಸ್ವಾಗತಿಸಿ, ನಿರೂಪಿಸಿದರು. ಮಹಿಳಾ ಸಹಕಾರ ಶಿಕ್ಷಕಿ ರಶೀದಾಬಾನು ಸಿ.ಯಲಿಗಾರ ವಂದಿಸಿದರು.

**ಬಾಕ್ಸ್**

ಸಹಕಾರಿ ಕಾಯಿದೆ ಇತ್ತೀಚಿನ ತಿದ್ದುಪಡಿಗಳ ಕುರಿತು ಸಹಕಾರ ಸಂಘಗಳ ಮಾರಾಟಾಧಿಕಾರಿ ಬಿ.ಆರ್. ನಿಡಗುಂದಿ, ಕೆ.ಸಿ.ಸಿ. ಬ್ಯಾಂಕಿನ ಆರ್ಥಿಕ ಹಾಗೂ ಡಿಜಿಟಲ್ ಸೇವಾ ಸೌಲಭ್ಯಗಳ ಕುರಿತು ಕೆ.ಸಿ.ಸಿ. ಬ್ಯಾಂಕ್ ಲಿ., ಗದಗ ಇದರ ಜಿಲ್ಲಾ ನಿಯಂತ್ರಣಾಧಿಕಾರಿ ಬಿ.ಎಂ. ಮುಧೋಳ, ಸ್ವ-ಸಹಾಯ ಸಂಘಗಳ ರಚನೆ ಹಾಗೂ ಕಾರ್ಯನಿರ್ವಹಣೆ ಕುರಿತು ಮುಂಡರಗಿ ತಾ.ಪಂ ತಾಲೂಕಾ ಕಾರ್ಯಕ್ರಮ ವ್ಯವಸ್ಥಾಪಕ ಶಿದ್ರಾಮಪ್ಪ ಉಪನ್ಯಾಸ ನೀಡಿದರು.

# ಕ.ವಿ.ವಿ. ಗದಗ ಜಿಲ್ಲಾ ವಲಯ ಮಟ್ಟದ ಯುವಜನೋತ್ಸವ

■ವಿಜಯಸಾಕ್ಷಿ ಸುದ್ದಿ, ರೋಣ

ಇಲ್ಲಿನ ಹೊಳೆ ಆಲೂರಿನ ಶ್ರೀ ಕಲ್ಮೇಶ್ವರ ವಿದ್ಯಾ ಪ್ರಸಾರಕ ಸಮಿತಿಯ ಕಲಾ, ವಿಜ್ಞಾನ, ವಾಣಿಜ್ಯ ಮಹಾವಿದ್ಯಾಲಯ ಹಾಗೂ ಕನ್ನಡ ಸ್ನಾತ್ತಕೋತ್ತರ ಅಧ್ಯಯನ ಕೇಂದ್ರದ ವತಿಯಿಂದ ಕ.ವಿ.ವಿ.ಯ ಆದೇಶದ ಮೇರೆಗೆ 2023-24ನೇ ಸಾಲಿನ ಗದಗ ಜಿಲ್ಲಾ ವಲಯ ಮಟ್ಟದ ಯುವಜನೋತ್ಸವವನ್ನು ಜ.23 ಮತ್ತು 24ರಂದು ಆಯೋಜಿಸಲಾಗಿದೆ.

ಈ ಹಿನ್ನೆಲೆಯಲ್ಲಿ ಮಹಾವಿದ್ಯಾಲಯದಲ್ಲಿ ಆಯೋಜಿಸಿದ ಗದಗ ಜಿಲ್ಲಾ ವಲಯ ಮಟ್ಟದ ಯುವಜನೋತ್ಸವ ಕಾರ್ಯಕ್ರಮದ ಸ್ಪರ್ಧೆಗಳಲ್ಲಿ ಜಿಲ್ಲೆಯ ಪದವಿ ಮಹಾವಿದ್ಯಾಲಯದಿಂದ ವಿದ್ಯಾರ್ಥಿ-ವಿದ್ಯಾರ್ಥಿನಿಯರ ತಂಡವು ತಪ್ಪದೇ ಆಗಮಿಸಿ ಸಕ್ರಿಯವಾಗಿ ಪಾಲ್ಗೊಳ್ಳಲು ಕೋರಲಾಗಿದೆ. ಸ್ಪರ್ಧಾಳುಗಳ ಹೆಸರುಗಳನ್ನು ನಿಯಮಾವಳಿಗಳ ಅನುಗುಣವಾಗಿ ಜ.19ರೊಳಗಾಗಿ skvpcollege@gmail.com ಇಲ್ಲಿಗೆ ಕಳುಹಿಸಿ ಕೊಡಬೇಕು.

ಹೆಚ್ಚಿನ ಮಾಹಿತಿಗಾಗಿ ಪ್ರೊ. ವಿ.ಪಿ. ಪಾಟೀಲ (9008200152), ಪ್ರೊ. ಶರಣಯ್ಯ ಬ ಹಳ್ಳೂರ(9972714327), ಪ್ರೊ. ಎನ್.ಆರ್. ಹಿರೇಸಕ್ಕರಗೌಡರ (8296153360), ಡಾ. ಎಸ್.ಬಿ. ಸಜ್ಜನರ (9945555084), ಡಾ.ಪ್ರಭು ಗಂಜಿಹಾಳ (9448775346), ಡಾ.ಕುಮಾರ ಹಂಜಗಿ(8050022649),ಇವರನ್ನು ಸಂಪರ್ಕಿಸಬಹುದು.

ನೋಂದಣಿಯ ಶುಲ್ಕವನ್ನು ಪ್ರಾಚಾರ್ಯರು ಎಸ್.ಕೆ.ವ್ಹಿ.ಪಿ ಸಮಿತಿಯ ಕಲಾ, ವಿಜ್ಞಾನ ಹಾಗೂ ವಾಣಿಜ್ಯ ಮಹಾವಿದ್ಯಾಲಯ ಹೊಳೆ-ಆಲೂರ ಇವರ ಹೆಸರಿನಲ್ಲಿ ಡಿ.ಡಿ.ಯನ್ನು ಕಳುಹಿಸಬೇಕು ಎಂದು ಪ್ರಾಚಾರ್ಯ ಡಾ. ಪಿ.ಎಸ್. ಕಣವಿ ತಿಳಿಸಿದ್ದಾರೆ.

## ಆರೋಗ್ಯ ಇಲಾಖೆಯಿಂದ ಮಾಧ್ಯಮ ಪ್ರತಿನಿಧಿಗಳಿಗೆ ಕಾರ್ಯಾಗಾರ

# ಸರ್ಕಾರದ ಕಾರ್ಯಕ್ರಮಗಳ ಸದುಪಯೋಗವಾಗಲಿ

■ವಿಜಯಸಾಕ್ಷಿ ಸುದ್ದಿ, ಗದಗ

ಆರೋಗ್ಯ ಇಲಾಖೆಯು ಜಿಲ್ಲೆಯ ಮಾಧ್ಯಮ ಮಿತ್ರರಿಗೆ 'ರಾಷ್ಟ್ರೀಯ ಆರೋಗ್ಯ ಅಭಿಯಾನ'ದಡಿಯಲ್ಲಿ ಸರಕಾರದ ಯೋಜನೆಗಳು ಸಾರ್ವಜನಿಕರಿಗೆ ತಲುಪಿಸಲು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವತಿಯಿಂದ ಮಾಧ್ಯಮ ಪ್ರತಿನಿಧಿಗಳಿಗೆ ಕಾರ್ಯಾಗಾರ ಆಯೋಜಿಸಲಾಗಿದೆ ಎಂದು ಜಿಲ್ಲಾ ಕುಷ್ಟರೋಗ ನಿಯಂತ್ರಣ ಅಧಿಕಾರಿ ಡಾ. ರಾಜೇಂದ್ರ ಬಸರಿಗಿಡದ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಮಂಗಳವಾರ ಆರೋಗ್ಯ ಇಲಾಖೆಯು 2023-24ನೇ ಸಾಲಿನ ಜಿಲ್ಲಾಮಟ್ಟದ ಮಾಧ್ಯಮ ಮಿತ್ರರಿಗೆ ಹಮ್ಮಿಕೊಂಡ ಕಾರ್ಯಾಗಾರನ್ನು ಉದ್ಘಾಟಿಸಿ ಅವರು ಮಾತನಾಡಿದರು.



ಆಯುಷ್ಮಾನ ಭಾರತ ಆರೋಗ್ಯ ಕರ್ನಾಟಕದ ಯೋಜನೆಯಲ್ಲಿ ಒಟ್ಟು 1650 ಖಾಯಿಲೆಗಳಿಗೆ, ಬಿಪಿಎಲ್ ಕಾರ್ಡ್‌ದಾರರಿಗೆ 5 ಲಕ್ಷ ರೂ. ಹಾಗೂ ಎಪಿಎಲ್ ಕಾರ್ಡ್‌ದಾರರಿಗೆ 1.50 ಲಕ್ಷ ರೂಗಳವರೆಗೆ ಉಚಿತವಾಗಿ ಚಿಕಿತ್ಸೆ ನೀಡಲಾಗುವುದು. ಅಲ್ಲದೆ, ಈ ಯೋಜನೆಯಲ್ಲಿ ಕೋವಿಡ್‌ನ್ನು ಸೇರಿಸಲಾಗಿದೆ ಎಂದು ಹೇಳಿದ ಅವರು, ಜಿಲ್ಲೆಯಲ್ಲಿ ಈ ಆರೋಗ್ಯ ಕಾರ್ಡ್ ಯೋಜನೆಯಲ್ಲಿ ಒಟ್ಟು 86,061 ಅರ್ಹ ಕಾರ್ಡ್‌ದಾರರಲ್ಲಿ 72,498 ಫಲಾನುಭವಿಗಳ ಚಿಕಿತ್ಸೆಗಾಗಿ 25,35,23,764 ರೂಗಳನ್ನು ಸರಕಾರ ವೆಚ್ಚ ಮಾಡಿದ್ದು, ಆರೋಗ್ಯ ಇಲಾಖೆಯ ಅನೇಕ ಕಾರ್ಯಕ್ರಮಗಳ ಸದುಪಯೋಗವನ್ನು ಪಡೆಯಲು ಸಾರ್ವಜನಿಕರು ಮುಂದೆ ಬರಬೇಕು ಎಂದು ಹೇಳಿದರು.

ಆರ್‌ಸಿಎಚ್ ಅಧಿಕಾರಿ ಡಾ.ಮೀನಾಕ್ಷಿ ಎಸ್.ಕೆ. ಪ್ರಾಸ್ತಾವಿಕವಾಗಿ ಮಾತನಾಡಿ, 2027ರ ಒಳಗಾಗಿ ಕುಷ್ಟರೋಗವನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡಲು ಗುರಿ ಹೊಂದಲಾಗಿದೆ. ಈ ನಿಟ್ಟಿನಲ್ಲಿ ನಮ್ಮ ಇಲಾಖೆಯ ಸಿಬ್ಬಂದಿಗಳು ಸಾಂಕ್ರಾಮಿಕ ರೋಗಗಳನ್ನು ನಿರ್ಮೂಲನೆ ಮಾಡಲು ಶ್ರಮಿಸುತ್ತಿದ್ದಾರೆ ಎಂದು ಹೇಳಿದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ರಾಜು ಹೆಬ್ಬಳ್ಳಿ ಮಾತನಾಡಿ, ಆರೋಗ್ಯ ಇಲಾಖೆ ಯೋಜನೆಗಳು ಸಾರ್ವಜನಿಕರಿಗೆ ತಲಪುವ ನಿಟ್ಟಿನಲ್ಲಿ ಮಾಧ್ಯಮ ಹೆಚ್ಚು ಕ್ರೀಯಾಶೀಲವಾಗಿ ಕಾರ್ಯ ನಿರ್ವಹಿಸುತ್ತ ಬಂದಿದೆ. ಜನರಿಗೆ ಆರೋಗ್ಯದ ಬಗ್ಗೆ ಹೆಚ್ಚು ಜಾಗೃತಿ ಮೂಡಿಸಲು ಮಾಧ್ಯಮವು ಆರೋಗ್ಯ ಇಲಾಖೆಯೊಂದಿಗೆ ಕೊಂಡಿಯಾಗಿ ಕೆಲಸ ಮಾಡುತ್ತಿದೆ ಎಂದು ಹೇಳಿದರು.

ಕಾರ್ಯಾಗಾರದಲ್ಲಿ ಪತ್ರಕರ್ತರ ಸಂಘದ ಕಾರ್ಯದರ್ಶಿ ಗಣೇಶ್ ಪೈ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ರೂಪಸೇನ್ ಚವ್ಹಾಣ ಸೇರಿದಂತೆ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳ ಅಧಿಕಾರಿಗಳು, ಪತ್ರಕರ್ತರು ಭಾಗವಹಿಸಿದ್ದರು. ಗೀತಾ ಕಾಂಬಳೆ ಕಾರ್ಯಕ್ರಮ ನಿರೂಪಿಸಿದರು. ಕುಬಸದ ವಂದಿಸಿದರು.

ಜಿಲ್ಲಾ ವಾರ್ತಾಧಿಕಾರಿ ವಸಂತ ಮಡ್ಲೂರ ಮಾತನಾಡಿ, ಸರಕಾರದ ಯೋಜನೆಗಳನ್ನು ಜನರಿಗೆ ತಲುಪಿಸಲು ಆರೋಗ್ಯ ಇಲಾಖೆಯು ಮಾಧ್ಯಮವನ್ನು ಹೆಚ್ಚು ಬಳಸಿಕೊಳ್ಳಬೇಕು. ಈ ಕಾರ್ಯಾಗಾರದಲ್ಲಿ ಪತ್ರಕರ್ತರು ಆರೋಗ್ಯ ಇಲಾಖೆಯ ಹಲವಾರು ಯೋಜನೆಗಳನ್ನು ತಿಳಿದುಕೊಂಡು ಸಾರ್ವಜನಿಕರಿಗೆ ಸೇವೆ ತಲುಪುವ ನಿಟ್ಟಿನಲ್ಲಿ ಕಾರ್ಯ ನಿರ್ವಹಿಸಬೇಕೆಂದರು. ಕೋವಿಡ್ ಸಂದರ್ಭದಲ್ಲಿ ಆರೋಗ್ಯ ಇಲಾಖೆಯಿಂದ ಹೆಚ್ಚಿನ ಸಹಕಾರ ದೊರೆತಿದ್ದು, ಕೇಂದ್ರ ಸರಕಾರದ ಆಭಾ ಕಾರ್ಡ್‌ನ ಪ್ರಯೋಜನ ಮಾಧ್ಯಮ ಪ್ರತಿನಿಧಿಗಳಿಗೆ ದೊರೆಯುವಂತಾಗಬೇಕು ಎಂದು ಹೇಳಿದರು.

# ಹೊಸ ವರ್ಷಕ್ಕೆ ಗ್ರೀಟಿಂಗ್ ಕಾರ್ಡ್ ವಿನಿಮಯ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ತಾಜ್‌ನಗರ ಗಂಗಿಮಡಿ ರಸ್ತೆಯಲ್ಲಿರುವ ಹಿದಾಯತ್ ಜೆ.ಯು. ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಹೊಸ ವರ್ಷ ಆಚರಣೆಯ ವೇಳೆಯಲ್ಲಿ ಶಿಕ್ಷಕರ ಮಾರ್ಗದರ್ಶನದಲ್ಲಿ ಗ್ರೀಟಿಂಗ್ ಕಾರ್ಡ್‌ಗಳನ್ನು ಬಳಸಿ, ಶಾಲಾ ವಿದ್ಯಾರ್ಥಿಗಳು ತಮ್ಮ ನೆಚ್ಚಿನ ಗುರುಗಳಿಗೆ, ಗೆಳೆಯ-ಗೆಳತಿಯರಿಗೆ ಹೊಸ ವರ್ಷದ ಸಂಭ್ರಮಾಚರಣೆಯ ಕುರಿತು ವಿವಿಧ ಕವನ, ಶುಭಾಶಯಗಳು, ಕಥೆಗಳನ್ನು ಬರೆದು ಅದನ್ನು ತಮ್ಮ ಪ್ರೀತಿ ಪಾತ್ರರಾದವರಿಗೆ ಕೊಡುವುದರ ಮೂಲಕ ಹೊಸ ವರ್ಷ ಆಚರಿಸಿದರು.

ಈ ಸಂದರ್ಭದಲ್ಲಿ ಶಾಲೆಯ ಮುಖ್ಯೋಪಾಧ್ಯಾಯೆ ಪಿ.ಬಿ. ಗುದಗಿ ಹಾಗೂ ಎಲ್ಲ ಶಿಕ್ಷಕರು ಹಾಗೂ ಮಕ್ಕಳು ಉಪಸ್ಥಿತರಿದ್ದರು.

# ಬದುಕಿನ ಸಾರ್ಥಕತೆಗೆ ಸತ್ಸಂಗ ಅಳವಡಿಸಿಕೊಳ್ಳಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ನಿತ್ಯ ಜೀವನದ ಜಂಜಾಟದಲ್ಲಿ ಆತ್ಮ ಸಂತೋಷ, ನೆಮ್ಮದಿ ಮತ್ತು ಬದುಕಿನ ಸಾಕ್ಷಾತ್ಕಾರಕ್ಕಾಗಿ ಸಂತರ, ಶರಣರ, ಮಹಾತ್ಮರ ಪುರಾಣ ಪುಣ್ಯ ಕಥೆ, ಜೀವನಾಮೃತ ಆಲಿಸುವುದು ಅವಶ್ಯಕವಾಗಿದೆ ಎಂದು ಹೂವಿನಶಿಗ್ಲಿ ವಿರಕ್ತಮಠದ ಶ್ರೀ ಚನ್ನವೀರ ಮಹಾಸ್ವಾಮಿಗಳು ಹೇಳಿದರು.

ಅವರು ಸೋಮವಾರ ಶ್ರೀಮಠದ 45ನೇ ಜಾತ್ರಾ ಮಹೋತ್ಸವ ಮತ್ತು ಲಿಂ.ನಿರಂಜನ ಮಹಾಸ್ವಾಮಿಗಳ 14ನೇ ಪುಣ್ಯಾರಾಧನೆ ಮಹೋತ್ಸವದ ಅಂಗವಾಗಿ ಹಮ್ಮಿಕೊಂಡಿದ್ದ ಶಿರಹಟ್ಟಿಯ ಜಗದ್ಗುರು ಶ್ರೀ ಫಕೀರೇಶ್ವರರ ಪುರಾಣ-ಪ್ರವಚನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಶಿರಹಟ್ಟಿಯ ಜಗದ್ಗುರು ಶ್ರೀ ಫಕೀರೇಶ್ವರರು ಜಾತಿ, ಮತ, ಧರ್ಮ ಬೇಧ-ಭಾವ ಅಳಿಸಿ ಭಾವೈಕ್ಯತೆಯ ಮಂತ್ರ ಸಾರಿದ್ದಾರೆ. ನಮ್ಮ ನೆಲದ ಶರಣರ-ಸಂತರು, ಸ್ವಾಮೀಜಿಗಳು ಸಮಾಜದ ಉದ್ಧಾರಕ್ಕಾಗಿ ತ್ರಿವಿಧ ದಾಸೋಹ ಸೇವೆ ಮಾಡಿ ಎಲ್ಲರ ಬದುಕಿಗೆ ದಾರಿದೀಪವಾಗಿದ್ದಾರೆ. ಪ್ರತಿಯೊಬ್ಬರೂ ತಮ್ಮ ಬದುಕಿನ ಪಾವಿತ್ರ್ಯತೆ ಮತ್ತು ಸಾರ್ಥಕತೆಗಾಗಿ ಜೀವನದಲ್ಲಿ ಧರ್ಮ, ಆಧ್ಯಾತ್ಮ, ಸತ್ಸಂಗವನ್ನು ಅಳವಡಿಸಿಕೊಳ್ಳಬೇಕು ಎಂದರು.



ಗವಿಸಿದ್ದೇಶ್ವರ ಶಾಸ್ತ್ರಿಗಳು ಪ್ರವಚನ ನೀಡಿದರು. ರವಿಕುಮಾರ್ ಆಳಂದ್ ಹಾಗೂ ತೋಟೇಂದ್ರ ಕುಮಾರ ಕರಡಕಲ್ ಸಂಗೀತ ಸೇವೆ ನೀಡಿದರು. ಈ ವೇಳೆ ಗ್ರಾ.ಪಂ ಅಧ್ಯಕ್ಷೆ ಲಕ್ಷ್ಮವ್ವ ಗಡ್ಡೆಣ್ಣನವರ, ಸದಸ್ಯೆ ಯಲ್ಲವ್ವ ಕುಂದಗೋಳ, ಗಿರಿಜವ್ವ ಗೋನಾಳ, ನೀಲವ್ವ ಬಾನಗೊಂಡ, ಬಸವರಾಜ ಹಳೇಮನಿ, ರೇಣುಕಗೌಡ ಪಾಟೀಲ, ಪಿ.ಎಚ್. ಪಾಟೀಲ, ಮಾಂತೇಶ ಹುಲ್ಲೂರು ಸೇರಿ ಹಲವರಿದ್ದರು. ಮಹದೇವ ಬಿಷ್ಟಣ್ಣವರ ನಿರೂಪಿಸಿದರು.

## ಶ್ರೀ ಆನಂದಮಯೀ ಶಿರಡಿ ಸಾಯಿಬಾಬಾ ಮಂದಿರದಲ್ಲಿ ದೀಪೋತ್ಸವ

# ಭಗವಾನ್ ಬಾಬಾ ಭಕ್ತರ ಬಾಳಿನ ಬೆಳಕು

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪರಿಶುದ್ಧ ಮತ್ತು ಸತ್ಯ-ಧರ್ಮ ನಿಷ್ಠತೆಯಿಂದ ತನ್ನ ಬಳಿ ಬರುವ ಭಕ್ತರ ಕಷ್ಟ-ಸಂಕಟಗಳನ್ನು ಸಂತ ಸದ್ಗುರು ಸಾಯಿಬಾಬಾ ಅವರು ದೂರ ಮಾಡಿ ಶಾಂತಿ, ಸಮೃದ್ಧಿ, ಸುಖ-ನೆಮ್ಮದಿ ಕರುಣಿಸುತ್ತಾರೆ ಎಂದು ಲಕ್ಷ್ಮೇಶ್ವರದ ಶ್ರೀ ಆನಂದಮಯೀ ಶಿರಡಿ ಸಾಯಿಬಾಬಾ ಮಂದಿರದ ಅರ್ಚಕ ಸಿದ್ಧಲಿಂಗಯ್ಯಶಾಸ್ತ್ರಿಗಳು ಹಿರೇಮಠ ಹೇಳಿದರು.



ಅವರು ಸೋಮವಾರ ದೇವಸ್ಥಾನದಲ್ಲಿ ಕಾರ್ತಿಕ ದೀಪೋತ್ಸವದ ಅಂಗವಾಗಿ ವಿಶೇಷ ಪೂಜೆ, ರುದ್ರಾಭಿಷೇಕ, ಗಣಹೋಮ, ಮೃತ್ಯುಂಜಯ, ಬೃಹಸ್ಪತಿ ಹೋಮ, ಪಂಚಾರತಿ, ಸಂಜೆ ಕಾರ್ತಿಕ ದೀಪೋತ್ಸವ, ಪಲ್ಲಕ್ಕಿಸೇವೆ ನೆರವೇರಿಸಿ ಮಾತನಾಡಿ, ಒಬ್ಬ ವ್ಯಕ್ತಿಯು ಲೌಕಿಕ ಜೀವನದ ದುಃಖಗಳನ್ನು ಹೋಗಲಾಡಿಸಲು ಬಯಸಿ ಸಾಯಿಬಾಬಾರನ್ನು ಆರಾಧಿಸಿದರೆ ಅದು ಖಂಡಿತವಾಗಿಯೂ ನೆರವೇರುತ್ತದೆ. ದೇವರು, ದೇವಮಾನವರಲ್ಲಿ ಅಚಲವಾದ ನಂಬಿಕೆ, ವಿಶ್ವಾಸವಿರಿಸಿಕೊಂಡರೆ ಅದು ಖಂಡಿತ ಶ್ರೇಷ್ಠವಾದ ಫಲವನ್ನೇ ನೀಡುತ್ತದೆ ಎಂದರು.

ರಾಣೆಬೆನ್ನೂರಿನ ಶನೇಶ್ವರಮಠದ ಶಿವಯೋಗಿ ಶಿವಾಚಾರ್ಯರು ಮಾತನಾಡಿ, ಶಿರಡಿ ಶ್ರೀ ಸಾಯಿಬಾಬಾರನ್ನು ಹಿಂದೂ, ಮುಸ್ಲಿಂ ಸೇರಿದಂತೆ ಎಲ್ಲ ಧರ್ಮದ ಅನುಯಾಯಿಗಳು ಪೂಜಿಸುತ್ತಾರೆ. ಅವರ ಅನುಯಾಯಿಗಳು ಅವರನ್ನು ಸಂತ, ಫಕೀರ, ಅವತಾರ ಅಥವಾ ಸದ್ಗುರು ಎಂದು ಪರಿಗಣಿಸುತ್ತಾರೆ. ಅವರು ಧರ್ಮ ಅಥವಾ ಜಾತಿಯ ಆಧಾರದ ಮೇಲೆ ಯಾವುದೇ ವ್ಯತ್ಯಾಸವನ್ನು ಮಾಡಲಿಲ್ಲ ಎಂದರು.

ಸಂಜೆ ಕಾರ್ತಿಕೋತ್ಸವದಲ್ಲಿ ಪಟ್ಟಣ ಸೇರಿ ಸುತ್ತಲಿನ ಗ್ರಾಮದಿಂದ ನೂರಾರು ಭಕ್ತರು ಆಗಮಿಸಿದ್ದರು. ದೀಪೋತ್ಸವ ಬಳಿಕ ಸಾರ್ವಜನಿಕ ಪ್ರಸಾದ ಸೇವೆ ಮಾಡಲಾಗಿತ್ತು. ಸುನೀಲ ಮಹಾಂತಶೆಟ್ಟರ, ಶೇಖಣ್ಣ ಹತ್ತಿಕಾಳ, ರಾಜಣ್ಣ ಕುಂಬಿ, ರಾಮು ಗಡದವರ, ಶಂಕರ ಬ್ಯಾಡಗಿ, ಸೋಮಪ್ಪ ಉಪನಾಳ, ಪ್ರವೀಣ ಬೋಮಲೆ, ನೀಲಪ್ಪ ಶರಸೂರಿ, ನೀಲಕಂಠಪ್ಪ ಬಂಕಾಪುರ, ರಾಮು ಅಡಗಿಮನಿ, ಪದ್ಮನಾಭ ಶೆಟ್ಟಿ, ಅಣ್ಣಪ್ಪ ಸಂಶಿ, ಮಲ್ಲಪ್ಪ ಮುಳಗುಂದ ಮುಂತಾದವರಿದ್ದರು.

ಜಿಲ್ಲಾ ವಾರ್ತಾಧಿಕಾರಿ ವಸಂತ ಮಡ್ಲೂರ ಮಾತನಾಡಿ, ಸರಕಾರದ ಯೋಜನೆಗಳನ್ನು ಜನರಿಗೆ ತಲುಪಿಸಲು ಆರೋಗ್ಯ ಇಲಾಖೆಯು ಮಾಧ್ಯಮವನ್ನು ಹೆಚ್ಚು ಬಳಸಿಕೊಳ್ಳಬೇಕು. ಈ ಕಾರ್ಯಾಗಾರದಲ್ಲಿ ಪತ್ರಕರ್ತರು ಆರೋಗ್ಯ ಇಲಾಖೆಯ ಹಲವಾರು ಯೋಜನೆಗಳನ್ನು ತಿಳಿದುಕೊಂಡು ಸಾರ್ವಜನಿಕರಿಗೆ ಸೇವೆ ತಲುಪುವ ನಿಟ್ಟಿನಲ್ಲಿ ಕಾರ್ಯ ನಿರ್ವಹಿಸಬೇಕೆಂದರು. ಕೋವಿಡ್ ಸಂದರ್ಭದಲ್ಲಿ ಆರೋಗ್ಯ ಇಲಾಖೆಯಿಂದ ಹೆಚ್ಚಿನ ಸಹಕಾರ ದೊರೆತಿದ್ದು, ಕೇಂದ್ರ ಸರಕಾರದ ಆಭಾ ಕಾರ್ಡ್‌ನ ಪ್ರಯೋಜನ ಮಾಧ್ಯಮ ಪ್ರತಿನಿಧಿಗಳಿಗೆ ದೊರೆಯುವಂತಾಗಬೇಕು ಎಂದು ಹೇಳಿದರು.

# ವಿಶ್ವ ಕೌಶಲ್ಯ ಸ್ಪರ್ಧೆಗೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮವು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ವತಿಯಿಂದ ವಿಶ್ವ ಕೌಶಲ್ಯ ಸ್ಪರ್ಧೆಯನ್ನು ಆಯೋಜಿಸಿದ್ದು, ಈ ಸ್ಪರ್ಧೆಗೆ ವಿವಿಧ ಹಂತದಲ್ಲಿ ಆಯ್ಕೆಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಿದೆ.

ಕರ್ನಾಟಕ ರಾಜ್ಯದಲ್ಲಿನ ಯುವ ಜನತೆಯು ವಿಶ್ವ ಕೌಶಲ್ಯ ಸ್ಪರ್ಧೆಯಲ್ಲಿ ಭಾಗವಹಿಸುವಂತೆ ಪ್ರೇರೇಪಿಸುವ ನಿಟ್ಟಿನಲ್ಲಿ ಸಮರ್ಥ ಅಭ್ಯರ್ಥಿಗಳನ್ನು ಆಯ್ಕೆ ಮಾಡಲು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ, ಮತ್ತು ಜೀವನೋಪಾಯ ಇಲಾಖೆಯಿಂದ ವಿಶ್ವ ಕೌಶಲ್ಯ ಸ್ಪರ್ಧೆಯ ಅಂಗವಾದ ಇಂಡಿಯಾ ಸ್ಕಿಲ್ ಕರ್ನಾಟಕ ಸ್ಪರ್ಧೆಗಳಿಗೆ ರಾಜ್ಯವನ್ನು ಪ್ರತಿನಿಧಿಸಲು ನಿಗಮವು ಜಿಲ್ಲಾ, ವಲಯ ಹಾಗೂ ರಾಜ್ಯಮಟ್ಟದ ಸ್ಪರ್ಧೆಯನ್ನು ಏರ್ಪಡಿಸಿದೆ.

ಈ ಸ್ಪರ್ಧೆಯಲ್ಲಿ ಭಾಗವಹಿಸಲು ಆಸಕ್ತ ಅಭ್ಯರ್ಥಿಗಳು 7ನೇ ಜನವರಿ 2024 ರೊಳಗಾಗಿ ಜಾಲತಾಣ https://www.skillindiadigital.gov.in ದಲ್ಲಿ ನೋಂದಾಯಿಸುವುದು.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕೌಶಲ್ಯಾಭಿವೃದ್ಧಿ ಕಚೇರಿ ಗದಗ ಜಿಲ್ಲೆಯ ಸಂಕಲ್ಪ ಸಂಯೋಜಕರಾದ ಶಿವಾನಂದ ಕಂಬಾರ ಮೊ.-9916185682 ರವರಿಗೆ ಸಂಪರ್ಕಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ: 18005999918 ನ್ನು ಹಾಗೂ ಜಿಲ್ಲಾ ಕೌಶಲ್ಯಾಭಿವೃದ್ಧಿ ಇಲಾಖೆ ಕೊಠಡಿ ಸಂಖ್ಯೆ-106, ಜಿಲ್ಲಾಡಳಿತ ಭವನ, 1ನೇ ಮಹಡಿ ಗದಗ ಇಲ್ಲಿ ಕಚೇರಿಯ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಗದಗ ಜಿಲ್ಲಾ ಕೌಶಲ್ಯಾಬಿವೃದ್ಧಿ ಅಧಿಕಾರಿಗಳಾದ ಡಾ. ಮಲ್ಲೂರ ಬಸವರಾಜ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಾರಾಯಣ ಗೌಡ ಜಾಮೀನು ಅರ್ಜಿ ತೀರ್ಪು ಕಾಯ್ದಿರಿಸಿದ ಕೋರ್ಟ್

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕನ್ನಡ ನಾಮಫಲಕಕ್ಕೆ ಆಗ್ರಹಿಸಿ ನಡೆದ ಪ್ರತಿಭಟನೆ ವೇಳೆ ಬಂಧನಕ್ಕೊಳಾಗಿಗರುವ ಕರ್ನಾಟಕ ರಕ್ಷಣಾ ವೇದಿಕೆ(ಕರವೇ) ಅಧ್ಯಕ್ಷ ನಾರಾಯಣ ಗೌಡ ಅವರ ಜಾಮೀನು ಅರ್ಜಿಯ ತೀರ್ಪನ್ನು ಕೋರ್ಟ್ ಮಂಗಳವಾರ ಕಾಯ್ದಿರಿಸಿದ್ದು, ಅವರಿಗೆ ಇನ್ನೂ 4 ದಿನ ಜೈಲು ಫಿಕ್ಸ್ ಆಗಿದೆ.

ಜಾಮೀನು ಕೋರಿ ನಾರಾಯಣ ಗೌಡ ಅವರು ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ದೇವನಹಳ್ಳಿಯ 5ನೇ ಹೆಚ್ಚುವರಿ ಸೆಷನ್ಸ್ ಕೋರ್ಟ್, ತೀರ್ಪು ಕಾಯ್ದಿರಿಸಿದ್ದು, ಜನವರಿ 6ರಂದು ಜಾಮೀನು ಬಗ್ಗೆ ಆದೇಶ ಪ್ರಕಟಿಸಲಿದೆ.

ಪ್ರಸ್ತುತ ಕರವೇ ಅಧ್ಯಕ್ಷ ನಾರಾಯಣಗೌಡ ಸೇರಿ ಕರವೇಯ 32 ಕಾರ್ಯಕರ್ತರು ಪರಪ್ಪನ ಅಗ್ರಹಾರ ಜೈಲಿನಲ್ಲಿದ್ದಾರೆ.


**ಪುರಸಭೆ ಕಾರ್ಯಾಲಯ, ಗಜೇಂದ್ರಗಡ, ಜಿಲ್ಲಾ : ಗದಗ**

**ದೂರವಾಣಿ : 08381-262222 ಫ್ಯಾಕ್ಸ್ : 08381-263552**

ಸಂಖ್ಯೆ:ಪುಸಗ/ಆ.ವಿ/ಎಸ್.ಬಿ.ಎಂ/ಐ.ಇ.ಸಿ/ಟೆಂಡರ/ವಹಿ/2023-24 ದಿ: 02/01/2024

**ಅಲ್ಪಾವಧಿ ಟೆಂಡರ್ ಪ್ರಕಟಣೆ**

ಪಾರದರ್ಶಕ ನಿಯಮಾವಳಿ 1999 ಹಾಗೂ 2000 ಪ್ರಕಾರ ಟೆಂಡರ ಕರೆಯಲಾಗಿದ್ದು, ಗಜೇಂದ್ರಗಡ ಪುರಸಭೆಗೆ ಸನ್ 2022-23 ನೇ ಸಾಲಿನ ಎಸ್.ಎಫ್.ಸಿ ಮತ್ತು ಎಸ್.ಸಿ.ಎಸ್.ಪಿ ಮತ್ತು ಟಿ.ಎಸ್.ಪಿ ಶೇ.24.10 (29%)ರ ಯೋಜನೆಯಡಿಯಲ್ಲಿ ಮಂಜೂರಾದ ಮೊತ್ತಕ್ಕೆ ಶೇ.20 ರಷ್ಟು ಮೊತ್ತವನ್ನು ಪೌರಕಾರ್ಮಿಕರ ಕಲ್ಯಾಣಕ್ಕಾಗಿ ಕಾಯ್ದಿರಿಸಿದ ಅನುದಾನ **ರೂ. 1.04** ಲಕ್ಷ ಯೋಜನೆಯಡಿಯಲ್ಲಿ ಪೌರಕಾರ್ಮಿಕ ಕಲ್ಯಾಣ ಯೋಜನೆಯಡಿ ಸ್ವಚ್ಛತೆ & ನೈರ್ಮಲ್ಯ ಕಾರ್ಯದಲ್ಲಿ ತೊಡಗಿರುವ ಖಾಯಂ/ಹೊರಗುತ್ತಿಗೆ ಪೌರಕಾರ್ಮಿಕರು/ಲೋಡರ್ಸ, ಡ್ರೈವರ್, ಸಫಾಯಿ ಕರ್ಮಚಾರಿ, ಸ್ಕ್ಯಾವೆಂಜರ್‌ಗಳಿಗೆ ಸುರಕ್ಷಾ ಧರಿಸುಗಳನ್ನು ಖರಿಧಿಸಲು ಹಾಗೂ ಸನ್-2023-24ನೇ ಸಾಲಿಗೆ **ರೂ. 1.06** ಲಕ್ಷದ ಒಟ್ಟು **ರೂ. 2.10** ಲಕ್ಷ ಅನುದಾನ ಕಾಯ್ದಿರಿಸಲಾಗಿದ್ದು, ಟೆಂಡರ್ ಫಾರ್ಮ ಫೀ ರೂ. **2,500+18%** ಜಿಎಸ್.ಟಿ,ಹಾಗೂ ಇ.ಎಂ.ಡಿ **ರೂ.5,250/-** ಗಳನ್ನು ಮುಖ್ಯಾಧಿಕಾರಿಗಳು ಪುರಸಭೆ ಇವರ ಹೆಸರಿನಲ್ಲಿ ಪಡೆದು ತಮ್ಮ ದರವಾರು ಲಕೋಟೆಗಳೊಂದಿಗೆ ಸಲ್ಲಿಸುವುದು, ಅರ್ಹ ಅಧಿಕೃತ ಕಂಪನಿಯ ಪೂರೈಕೆದಾರರು ಸುರಕ್ಷಾ ಪರಿಕರಗಳನ್ನು ಪೂರೈಸಲು ತಮ್ಮ ದರವಾರುಗಳನ್ನು ನಿಗದಿತ ಅವಧಿಯಲ್ಲಿ ಸಲ್ಲಿಸತಕ್ಕದ್ದು ಅವಧಿ ಮೀರಿ ಬಂದ ದರವಾರುಗಳನ್ನು ಗಣನೆಗೆ ತೆಗೆದುಕೊಳ್ಳಲಾಗುವುದಿಲ್ಲ. (ರಜಾ ದಿನಗಳನ್ನು ಹೊರತುಪಡಿಸಿ (1) ಖಾಲಿ ಟೆಂಡರಗಳನ್ನು ಕೋರಿ ಅರ್ಜಿ ವಿತರಿಸುವ ದಿನಾಂಕ: **03-01-2024** ರಿಂದಾ ದಿನಾಂಕ: **10-01-2024,** 4-00 ಘಂಟೆಯ ವರೆಗೆ. (2) ಭರ್ತಿ ಮಾಡಿದ ಟೆಂಡರ ಪೆಟ್ಟಿಗೆಯಲ್ಲಿ ಹಾಕಲು ನಿಗಧಿಪಡಿಸಿದ ದಿನಾಂಕ: **10-01-2024** ಸಾಯಂಕಾಲ 4-00 ಗಂಟೆಯೊಳಗೆ, (3) ಟೆಂಡರ ತೆರೆಯುವ ದಿನಾಂಕ: **10-01-2024** ಸಾಯಂಕಾಲ 5.00 ಘಂಟೆಗೆ.

ಹೆಚ್ಚಿನ ಮಾಹಿತಿಗಾಗಿ ಹಾಗೂ ಪುರಸಭೆ ಕಾರ್ಯಾಲಯದ ವೇಳೆಯಲ್ಲಿ ಆರೋಗ್ಯ ಶಾಖೆಯಲ್ಲಿ ಪಡೆಯಬಹುದು ವಿವರವನ್ನು ಕಾರ್ಯಾಲಯದ ಸೂಚನಾಫಲಕದಲ್ಲಿ ನೋಡಿಕೊಳ್ಳುವುದು.

**ಸಹಿ/- ಮುಖ್ಯಾಧಿಕಾರಿ ಪುರಸಭೆ ಗಜೇಂದ್ರಗಡ**

**ಸಹಿ/- ಆಡಳಿತಾಧಿಕಾರಿಗಳು ಪುರಸಭೆ ಗಜೇಂದ್ರಗಡ**


ವಾಸಾಸಂಇ/ಗದಗ/ಕೆಎಸ್‌ಎಂಸಿಎ/421/2023-24


# ವಿಕಲಚೇತನರ ಪಾಸ್ ಅವಧಿ ವಿಸ್ತರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ವಿಕಲಚೇತನರ ಪಾಸ್ ಹೊಂದಿರುವ ಅಭ್ಯರ್ಥಿಗಳ ಪಾಸಿನ ಮಾನ್ಯತಾ ಅವಧಿಯನ್ನು ಫೆಬ್ರುವರಿ 28 ರವರೆಗೆ ವಿಸ್ತರಿಸಲಾಗಿದೆ. ಆಯಾ ತಾಲೂಕಾವಾರು ಸಂಬಂಧಿಸಿದ ಘಟಕಗಳಲ್ಲಿ ವಿಕಲಚೇತನರ ಪಾಸುಗಳನ್ನು ಜನವರಿ 15 ರಿಂದ ನವೀಕರಿಸಲಾಗುತ್ತದೆ. ವಿಕಲಚೇತನರ ಪಾಸ್ ಹೊಂದಿರುವ ಅಭ್ಯರ್ಥಿಗಳು ಸೇವಾಸಿಂಧು ಪೋರ್ಟಲ್ ಮುಖಾಂತರ ಅರ್ಜಿ ಸಲ್ಲಿಸಿ ನಂತರ ತಮ್ಮ ಎಲ್ಲಾ ಮೂಲ ದಾಖಲಾತಿಗಳ ಝೆರಾಕ್ಸ್ ಪ್ರತಿಗಳೊಂದಿಗೆ ಹಳೇ ಪಾಸನ್ನು ಮರಳಿ ನೀಡಿ ನವೀಕರಿಸಲು ನಿಗದಿಪಡಿಸಿದ ನಗದು ಹಣ 660 ರೂ.ಗಳನ್ನು ಹಾಗೂ 2 ಫೋಟೋಗಳೊಂದಿಗೆ ಸಂಬಂಧಪಟ್ಟ ತಾಲೂಕಾವಾರು ಘಟಕಗಳ ಬಸ್ ನಿಲ್ದಾಣದಲ್ಲಿ ಹೊಸ ಪಾಸನ್ನು ಪಡೆಯುವುದು. ಅದೇ ರೀತಿ ಹೊಸ ಪಾಸುಗಳನ್ನು ವಿಭಾಗೀಯ ಕಚೇರಿ ಗದಗ ವಿಭಾಗ ಗದಗ ಇವರಲ್ಲಿ ಪಡೆಯಲು ವಾ.ಕ.ರ.ಸಾ.ಸಂಸ್ಥೆ ವಿಭಾಗೀಯ ನಿಯಂತ್ರಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಮ್ಮೇಳನಾಧ್ಯಕ್ಷರಾಗಿ ಚಂದ್ರಕಲಾ ಇಟಗಿಮಠ ಆಯ್ಕೆ



■ವಿಜಯಸಾಕ್ಷಿ ಸುದ್ದಿ, ಗದಗ

ರಾಯಚೂರಿನ 'ಹೆಣ್ಣು ಜಗದ ಕಣ್ಣು' ಸಾಹಿತ್ಯ ವೇದಿಕೆಯು ಜ.6ರಂದು ಧಾರವಾಡದ ಜಿಲ್ಲಾ ಸಾಹಿತ್ಯ ಭವನದಲ್ಲಿ ಹಮ್ಮಿಕೊಂಡಿರುವ ಮಹಿಳಾ ಸಾಹಿತ್ಯ ಸಮ್ಮೇಳನ, ಕಿತ್ತೂರು ಚೆನ್ನಮ್ಮ ಪ್ರಶಸ್ತಿ ಪ್ರದಾನ ಮತ್ತು ಪುಸ್ತಕ ಬಿಡುಗಡೆ ಕಾರ್ಯಕ್ರಮದ ಸಮ್ಮೇಳನಾಧ್ಯಕ್ಷರಾಗಿ ಕಪ್ಪತ್ತಗಿರಿ ಫೌಂಡೇಶನ್‌ನ ಗದಗ ಘಟಕದ ಅಧ್ಯಕ್ಷರಾದ ಚಂದ್ರಕಲಾ ಇಟಗಿಮಠ ಕಳಸಾಪೂರ ಇವರನ್ನು ಆಯ್ಕೆ ಮಾಡಲಾಗಿದೆ.

ಇವರಿಗೆ ವೇದಿಕೆಯ ಸಂಸ್ಥಾಪಕ ಅಧ್ಯಕ್ಷ ರಮೇಶ ನಾಯ್ಕ್ ಹಾಗೂ ಬಳಗದವರು ಸನ್ಮಾನಿಸಿ, ಕಾರ್ಯಕ್ರಮಕ್ಕೆ ಅಧಿಕೃತವಾಗಿ ಆಹ್ವಾನ ನೀಡಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka